KA / BG-GPO/2515/WPP-47/2009-2011

ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ ೧೪೬	ಬೆಂಗಳೂರು, ಗುರುವಾರ, ಜುಲೈ ೧೪, ೨೦೧೧ (ಆಷಾಢ ೨೩ ಶಕ ವರ್ಷ ೧೯೩೩)	ಸಂಚಿಕೆ ೨೮

ಭಾಗ–೩

ಸರ್ಕಾರದ ಆಯಾ ಇಲಾಖೆಗಳ ಮುಖ್ಯಸ್ಥರ ಮತ್ತು ಸ್ಥಳೀಯ ಪ್ರಾಧಿಕಾರಿಗಳಿಗೆ ಸಂಬಂಧಿಸಿದ ಅಧಿಸೂಚನೆಗಳು

ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಇವರ ನ್ಯಾಯಾಲಯ

ಬಿ3:ಅಮೊ:ವಾಹನ:ವಿವ:15/09-10, ದಿನಾಂಕ:05-02-2011

ಉಪಸ್ಥಿತರು	:	ಶ್ರೀ ಮನೋಜ್ ಕುಮಾರ್ ತ್ರಿಪಾಠಿ, ಭಾ.ಅ.ಸೇ., ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ.
ಪಿರ್ಯಾಧಿದಾರರು	:	ವಲಯ ಅರಣ್ಯಾಧಿಕಾರಿ, ಆನಂದಪುರಂ ವಲಯ, ಚೋರಡಿ (ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು, ಸಾಗರ)
ಆರೋಪಿಗಳು	:	1)ಬಿಕೇಶಿ 2)ಶಹೀದ್ 3)ವಾಜೀದ್ 4)ಇದಯಿತ್ 5)
ಬಾಧ್ಯತೆದಾರರು	:	ಯಾರು ಹಕ್ಕುಬಾಧ್ಯತೆಯ ಅರ್ಜಿ ಸಲ್ಲಿಸಿರುವುದಿಲ್ಲ

ಪ್ರಸ್ತಾವನೆ:–

ದಿ:24–07–2009 ರಂದು ಆನಂದಪುರಂ ವಲಯದ ಚೋರಡಿ ಶಾಖೆಯ ವನಪಾಲಕರು ಮತ್ತು ಸಿಬ್ಬಂದಿಯವರು ಬೆಳಿಗ್ಗೆ 6–00 ಗಂಟೆಗೆ ಚೋರಡಿ ಗ್ರಾಮದ ಕರಡಿಬೆಟ್ಟ ಮೀಸಲು ಅರಣ್ಯದಲ್ಲಿ ಗಸ್ತು ಮಾಡುತ್ತಿರುವಾಗ ಚೋರಡಿಯಿಂದ ಶಿಕಾರಪುರಕ್ಕೆ ಹೋಗುವ ರಸ್ತೆಯಲ್ಲಿ ಎರಡು ಬೈಕ್‌ಗಳಲ್ಲಿ (ಬೀಟೆ ನಾಟಾ ಸಾಗಾಣಿಕೆ ಮಾಡುತ್ತಿರುವುದನ್ನು) ನಿಲ್ಲಿ ನೋಡಲಾಗಿ ಟಿ.ವಿ.ಎಸ್. ಬೈಕ್ ಕೆಎ–15–ಕೆ–3504ರಲ್ಲಿ ಒಂದು ಬೀಟೆ ತುಂಡು ಅಳತೆ 0.026 ಎಂ3 ಮತ್ತು ಇನ್ನೊಂದು ಹಿರೋಹೊಂಡಾ ಬೈಕ್ ಕೆಎ–27–ಕೆ–6266ರಲ್ಲಿ ಒಂದು ಬೀಟೆ ತುಂಡು ಅಳತೆ 0.027 ಎಂ3 ಇದ್ದು, ಈ ಬೀಟೆ ನಾಟಾ ಸಾಗಾಣಿಕೆಗೆ ರಹದಾರಿಯನ್ನು ಬೈಕ್‌ನಲ್ಲಿದ್ದ (1) ಬಿರೇಶ ಬಿನ್ ಹಾಲಪ್ಪಗೌಡ, 25 ವರ್ಷ, ಜಂಬೂರು ವಾಸಿ, ಸಾಗರ ತಾ. (2)ಷಹೀದ್ ಬಿನ್ ರಸೋಲ್ ಸಾಬ್, 23 ವರ್ಷ, ಈಸೂರು ಗ್ರಾಮ, ಶಿಕಾರಿಪುರ ತಾ. (3) ವಾಜೀದ್ ಬಿನ್ ಅಬ್ದುಲ್ ರೆಹಮಾನ್ ಸಾಬ್, 25 ವರ್ಷ, ತುಂಬೆಹೊಂಡ ಬೀದಿ, ಮುಸ್ಲಿಂ ಕೇರಿ, ಈಸೂರು ಗ್ರಾಮ, ಶಿಕಾರಿಪುರ ತಾ. (4) ಇದಾಲತ್ ಬಿನ್ ಖಾದರ್‌ಸಾಬ್, 34 ವರ್ಷ, ಗಾಂಧಿನಗರ ಒಂದನೇ ಮೈನ್, ಒಂದನೇ ಕ್ರಾಸ್, ಹರಿಹರ ತಾ. ಇವರನ್ನು ಕೇಳಲಾಗಿ ರಹದಾರಿ ಇಲ್ಲವೆಂದು ಮತ್ತು ಇದನ್ನು ಜಂಬೂರುಮನೆ ಬಳಿಯಿರುವ ಕಾಡಿನಿಂದ ಕಡಿದಿದ್ದೆಂದು ತಿಳಿಸಿದರು. ಈ ತುಂಡುಗಳಿಗೆ ಇಲಾಖೆಯ ಯಾವುದೇ ಛಾಪಾದ ಗುರುತಿರಲಿಲ್ಲ. ಇದು ಅಕ್ರಮ ಸಾಗಾಣಿಕೆ ಎಂದು ಪರಿಗಣಿಸಿ, ಆಸಾಮಿ, ವಾಹನ ಮತ್ತು ಬೀಟೆ ನಾಟಾವನ್ನು ಪ್ರಥಮ ವರ್ತಮಾನ ವರದಿ, ಮಹಜರ್ ವರದಿ, ಜಪ್ತಿ ವರದಿಯೊಂದಿಗೆ ಇಲಾಖಾ ಪರ ಜಪ್ತುಮಾಡಿ, ಕರ್ನಾಟಕ ಅರಣ್ಯ ಕಾಯ್ದೆ 1963 ಸೆಕ್ಷನ್ 24, 62, 71(ಎ) ಮತ್ತು ಕರ್ನಾಟಕ ಅರಣ್ಯ ಕಾನೂನು 1969ರ ಉಪ ನಿಯಮ 144, 165ರ ಪ್ರಕಾರ ಚೋರಡಿ ವಲಯದ ಅರಣ್ಯ ಮೊಕದ್ದಮೆ ಸಂಖ್ಯೆ: 50/09–10ನ್ನು ದಾಖಲಿಸಿ ವಾಹನವನ್ನು ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಇವರ ಸಮಕ್ಷಮ ಹಾಜರಪಡಿಸಿರುತ್ತಾರೆ. ನಂತರ ಈ ವಾಹನವನ್ನು ಸರ್ಕಾರಿ ನಾಟಾ ಸಂಗ್ರಹಾಲಯದಲ್ಲಿರುವ ವಾಹನ ಶೆಡ್ಡಿನಲ್ಲಿ ಸುರಕ್ಷತೆಗಾಗಿಡಲು ವಲಯ ಅರಣ್ಯಾಧಿಕಾರಿ, ಸರ್ಕಾರಿ ನಾಟಾ ಸಂಗ್ರಹಾಲಯ, ಸಾಗರ ಇವರ ಸುಪರ್ಧಿಗೆ ಕೊಡಲು ಆದೇಶವಾಗಿದೆ.

ನಂತರ ಈ ವಾಹನದ 'ಬಿ' ಎಕ್ಸ್‌ಟ್ರ್ಯಾಕ್ಟ್ ಈ ನ್ಯಾಯಾಲಯಕ್ಕೆ ಒದಗಿಸಲು ಸಹಾಯಕ ಸಾರಿಗೆ ಅಧಿಕಾರಿ, ಸಾಗರ ಇವರಿಗೆ ಈ ನ್ಯಾಯಾಲಯದ ಪತ್ರ ಸಂ:ಬಿ3.ಅಮೊ.ವಾಹನ.15/09–10ನ್ನು ದಿ:30–10–2009 ರಂದು ಬರೆದು ಕೋರಲಾಯಿತು. ಅದರಂತೆ ಸಾರಿಗೆ ಅಧಿಕಾರಿ, ಸಾಗರ ಇವರಿಂದ 'ಬಿ' ಎಕ್ಸ್‌ಟ್ರ್ಯಾಕ್ಟ್‌ನ್ನು ವಲಯ ಅರಣ್ಯಾಧಿಕಾರಿ ಸಾಗರ ವಲಯ, ಇವರು ಪಡೆದು ಪತ್ರ ಸಂ:ವಅಅ.ಅಮೊ.ವಾಹನ.1955/10–11 ದಿ:24–12–2010 ರಂದು ಈ ನ್ಯಾಯಾಲಯಕ್ಕೆ ಒದಗಿಸಿರುತ್ತಾರೆ. 'ಬಿ' ಎಕ್ಸ್‌ಟ್ರ್ಯಾಕ್ಟ್‌ನಲ್ಲಿ ನಮೂದಿಸಿದ ಆರ್.ಸಿ. ಮಾಲೀಕರಾದ ಶ್ರೀ ಬಿರೇಶ್ ಬಿನ್ ಹಾಲಪ್ಪಗೌಡ, ಜಂಬೂರುಮನೆ ವಾಸಿ, ಗೌತಮಪುರ ಅಂಚೆ, ಸಾಗರ ತಾ. ಇವರಿಗೆ ವಲಯ ಅರಣ್ಯಾಧಿಕಾರಿ, ಆನಂದಪುರಂ ವಲಯ, ಚೋರಡಿ ಇವರ ಮುಖಾಂತರ ದಿ:30–12–2010 ರಂದು 30 ದಿನಗಳ ಕಾಲಾವಕಾಶ ನೀಡಿ ಕರ್ನಾಟಕ ಅರಣ್ಯ ಕಾಯಿದೆ 1963 ಸೆಕ್ಷನ್ 71 ಬಿ(1)ರ ಪ್ರಕಾರ ನೋಟಿಸ್‌ನ್ನು ಜಾರಿ ಮಾಡಿದೆ. ಆದರೆ ಇಲ್ಲಿಯವರೆಗೂ ಆರ್.ಸಿ. ಮಾಲೀಕರಾಗಲೀ ಅವರ ಪರ ವಕೀಲರಾಗಲೀ ಈ ನ್ಯಾಯಾಲಯಕ್ಕೆ ಈ ವಾಹನದ ಹಕ್ಕುಬಾಧ್ಯತೆ ಅರ್ಜಿ ಸಲ್ಲಿಸಿರುವುದಿಲ್ಲ.

ಸಹಾಯಕ ಸರ್ಕಾರಿ ಅಭಿಯೋಜಕರು ದಿ:29–01–2011 ರಂದು ವಾದ ಮಂಡಿಸಿ, ಸದರಿ ವಾಹನದಲ್ಲಿ ಅರಣ್ಯ ಉತ್ಪನ್ನವನ್ನು ಸಾಗಿಸುತ್ತಿರುವಾಗ ಮಾಲು ಸಹಿತ ವಲಯ ಅರಣ್ಯಾಧಿಕಾರಿ, ಆನಂದಪುರಂ ವಲಯ, ಚೋರಡಿ ಇವರು ವಾಹನವನ್ನು ಜಪ್ತುಮಾಡಿ ಮಹಜರ್ ಪ್ರತಿ ಮತ್ತು ಪ್ರಥಮ ವರ್ತಮಾನ ವರದಿ, ಜಪ್ತಿ ವರದಿಯನ್ನು ಈ ನ್ಯಾಯಾಲಯಕ್ಕೆ ಹಾಜರ್ಪಡಿಸಿರುವುದರಿಂದ ಈ ವಾಹನದಲ್ಲಿ ಬೀಟೆ ತುಂಡುಗಳನ್ನು ಅಕ್ರಮವಾಗಿ ಸಾಗಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಕೋರಿರುತ್ತಾರೆ.

ಈ ಪ್ರಕರಣದ ಎಲ್ಲಾ ದಾಖಲೆಗಳನ್ನು ಪರಿಶೀಲಿಸಿ, ಅಭಿಯೋಜಕರ ವಾದವನ್ನು ಕೇಳಿದೆ. ಹಾಗೂ ಈ ವಾಹನದ ಬಗ್ಗೆ ಪತ್ರಿಕಾ ಪ್ರಕಟಣೆ ಹೊರಡಿಸಿರುತ್ತದೆ. ಈ ಪ್ರಕಟಣೆಯು ರಾಜ್ಯ ಗೆಜೆಟ್‌ನಲ್ಲಿ ಮತ್ತು ದಿನಪತ್ರಿಕೆಯಲ್ಲಿ ಪ್ರಕಟಗೊಂಡು ಮತ್ತು ಆರ್.ಸಿ. ಮಾಲೀಕರಿಗೆ ಕರ್ನಾಟಕ ಅರಣ್ಯ ಕಾಯಿದೆ 1963 ಸೆಕ್ಷನ್ 71 ಬಿ(1)ರ ಪ್ರಕಾರ ನೋಟಿಸ್‌ನ್ನು ಜಾರಿ ಮಾಡಿ 30 ದಿನಗಳಾದರೂ ಯಾರೂ ಹಕ್ಕು ಬಾಧ್ಯತೆಯ ಅರ್ಜಿಯನ್ನು ಈ ನ್ಯಾಯಾಲಯಕ್ಕೆ ಸಲ್ಲಿಸದೇ ಇದ್ದುದ್ದರಿಂದ ಈ ಪ್ರಕರಣದ ವಿದ್ಯಾಮಾನಗಳನ್ನು ಅರಿತು ಈ ಕೆಳಗಿನಂತೆ ಆದೇಶ ಹೊರಡಿಸಿದೆ.

ಆದೇಶ

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳನ್ನು ಗಣನೆಗೆ ತೆಗೆದುಕೊಂಡು ಶ್ರೀ ಮನೋಜ್ ಕುಮಾರ್ ತ್ರಿಪಾಠಿ, ಭಾ.ಅ.ಸೇ., ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಆದ ನಾನು, ಕರ್ನಾಟಕ ಅರಣ್ಯ ಕಾಯಿದೆ 1963 ಸೆಕ್ಷನ್ 71(ಎ) ರಿಂದ (ಜಿ)ಪ್ರಕಾರ ವಲಯ ಅರಣ್ಯಾಧಿಕಾರಿ, ಆನಂದಪುರಂ ವಲಯ, ಚೋರಡಿ ಇವರು ಜಪ್ತು ಮಾಡಿದ ವಾಹನ ಟಿ.ವಿ.ಎಸ್. ವಿಕ್ಟರ್ ಬೈಕ್ ಕೆಎ–15–ಕೆ–3504 (ಛಾಸ್ಸಿಸ್ ನಂ:MD625AF1561L47609, ಇಂಜಿನ್ ನಂ:OF1L61561355) ನ್ನು ಮತ್ತು ಈ ವಾಹನದಲ್ಲಿದ್ದ, 1 ತುಂಡು ಬೀಟೆ ಒಟ್ಟು 0.026 ಎಂ3ವು ಕರ್ನಾಟಕ ಸರ್ಕಾರದ ಸಂಪತ್ತು ಆಗಿರುವುದರಿಂದ ಅಂತಿಮವಾಗಿ ಮುಟ್ಟುಗೋಲು ಹಾಕಿಕೊಂಡಿರುತ್ತೇನೆ. ಮುಟ್ಟುಗೋಲು ಹಾಕಿಕೊಂಡ ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಅನುಕೂಲಕರವಾಗಿ ವಿಲೇ ಮಾಡಲು ಆದೇಶಿಸಿದ್ದೇನೆ. ಈ ಆದೇಶವನ್ನು ಹೇಳಿ ಬರೆಯಿಸಿ, ಗಣಕಯಂತ್ರದಲ್ಲಿ ಮುದ್ರಿಸಿ, ನಂತರ ಸರಿಪಡಿಸಿ ದಿ: 05–02–2011 ರಂದು ನನ್ನ ಸಹಿ ಹಾಗೂ ಮೊಹರಿನೊಂದಿಗೆ ತೆರೆದ ನ್ಯಾಯಾಲಯದಲ್ಲಿ ಆದೇಶಿಸಿದ್ದೇನೆ. ಈ ಆದೇಶ ಹೊರಡಿಸಿದ 30(ಮೂವತ್ತು) ದಿನಗಳ ಒಳಗಾಗಿ ಯಾರು ಯಾರೂ ಮೇಲ್ಮನವಿ ಸಲ್ಲಿಸದೇ ಹೋದಲ್ಲಿ ಇದೇ ಅಂತಿಮ ಆದೇಶವಾಗಿರುತ್ತದೆ.

ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ
ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ.

ಪಿ.ಆರ್.211

ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಇವರ ನ್ಯಾಯಾಲಯದಲ್ಲಿ

ಬಿ3:ಅಮೊ:ವಾಹನ:ವಿವ:06/2010–11, ದಿನಾಂಕ:05–03–2011

ಉಪಸ್ಥಿತರು	:	ಶ್ರೀ ಮನೋಜ್ ಕುಮಾರ್ ತ್ರಿಪಾಠಿ, ಭಾ.ಅ.ಸೇ., ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಣ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ.
ಫಿರ್ಯಾಧಿದಾರರು	:	ವಲಯ ಅರಣ್ಯಾಧಿಕಾರಿ, ಅಂಬ್ಲಿಗೊಳ ವಲಯ (ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು, ಸಾಗರ)
ಆರೋಪಿಗಳು	:	(1) ಹರೀಶ (2)ಶಿವಕುಮಾರ (3)ರವಿ (4)ಸಿದ್ದಪ್ಪ (4)ಹರೀಶ (5)ರಾಘವೇಂದ್ರ
ಬಾಧ್ಯತೆದಾರರು	:	ಯಾರು ಮುಂದೆ ಬಂದಿರುವುದಿಲ್ಲ

ಪ್ರಸ್ತಾವನೆ:–

ದಿ:22–06–2010 ರಂದು ಅಂಬ್ಲಿಗೊಳ ವಲಯದ ಅಂಬ್ಲಿಗೊಳ ಶಾಖೆ ಮತ್ತು ಸಾಲೂರು ಶಾಖೆಯ ವನಪಾಲಕ, ಸಿಬ್ಬಂದಿಯವರು ಮತ್ತು ಅರಣ್ಯ ಸಂಚಾರಿದಳದ ಸಿಬ್ಬಂದಿಯವರೊಂದಿಗೆ ಬೆಳಂದೂರು ಮನ್ನಾ ಜಂಗ್ಲಿಯ ಬೆಳಂದೂರು ಗ್ರಾಮದ ಸ.ನಂ. 36ರಲ್ಲಿ ಬೆಳಿಗ್ಗೆ 7–30ರ ಸಮಯದಲ್ಲಿ ಅರಣ್ಯ ಗಸ್ತು ಮಾಡುತ್ತಿರುವಾಗ ಒಂದು ವಾಹನ ಮರಕ್ಕೆ ಡಿಕ್ಕಿ ಹೊಡೆದು ನಿಲ್ಲಿಸಿದ್ದು ಕಂಡುಬಂದಿದ್ದು, ಅದು ಬಿಳಿಬಣ್ಣದ ಮಾರುತಿ ಓಮ್ನಿ ವಾಹನವಾಗಿದ್ದು, ಜಿಎ–01–ಎನ್–0462 (ಛಾಸ್ಸಿಸ್ ನಂಬರ್ ಮತ್ತು ಇಂಜಿನ್ ನಂಬರ್ ಕಂಡುಬಂದಿರುವುದಿಲ್ಲ) ವಾಹನದೊಳಗಡೆ 6 ಜನರಿದ್ದು, ಒಬ್ಬ ವಾಹನವನ್ನು ರಿಪೇರಿ ಮಾಡುತ್ತಿದ್ದು, ಉಳಿದ 5 ಜನ ಹಿಂದೆ ಕುಳಿತ್ತಿದ್ದರು. ವಾಹನವನ್ನು ಸುತ್ತುವರಿದು 4 ಜನರನ್ನು ಹಿಡಿಯಲಾಯಿತು. ಉಳಿದ ಇಬ್ಬರು ಕೈಗೆ ಸಿಗದೇ ತಪ್ಪಿಸಿಕೊಂಡಿರುತ್ತಾರೆ. (1)ನೇ ಹರೀಶ ಬಿನ್ ಚಂದ್ರಪ್ಪ, 24 ವರ್ಷ, ಗಡೇಶ್ವರ ಬೀದಿ (2)ಶಿವಕುಮಾರ ಬಿನ್ ಸಿದ್ದಪ್ಪ, 25 ವರ್ಷ, ಭದ್ರಾಪುರ ವಾಸಿ (3)ರವಿ ಬಿನ್ ರಾಮಪ್ಪ, 23 ವರ್ಷ, ಭದ್ರಾಪುರ ವಾಸಿ (4) ಹರೀಶ ಬಿನ್ ತಿಮ್ಮಪ್ಪ, 19 ವರ್ಷ, ಭದ್ರಾಪುರ ವಾಸಿ, ಇಬ್ಬರು

ತಲೆಮರೆಸಿಕೊಂಡವರು (1)ಸಿದ್ದಪ್ಪ ಬಿನ್ ರಾಮಣ್ಣ, 25 ವರ್ಷ (2)ರಾಘವೇಂದ್ರ ಬಿನ್ ರಾಮಣ್ಣ, ಇಬ್ಬರು ಮಯಪ್ಪನಕೇರಿ, ಶಿಕಾರಿಪುರ ಟೌನ್ ಎಂದು ತಿಳಿಸಿದರು. ವಾಹನದೊಳಗಡೆ ಪರಿಶೀಲಿಸಿ ನೋಡಲಾಗಿ ಬೀಟೆ ಜಾತಿಯ 4 ತುಂಡುಗಳಿದ್ದು, ಅದರ ಅಳತೆ 0.768 ಎಂ3 ಪ್ರಮಾಣವಿದ್ದು, ಸದರಿ ತುಂಡುಗಳನ್ನು ಗರಗಸದಿಂದ ಕೊಯ್ತು ಮಾಡಿದಾಗಿದ್ದು, ಸಿಕ್ಕಿಬಿದ್ದ ಆಸಾಮಿಗಳನ್ನು ವಿಚಾರಿಸಲಾಗಿ ಸದರಿ ತುಂಡುಗಳನ್ನು ಸಿದ್ದಪ್ಪ ಬಿನ್ ರಾಮಣ್ಣ, ಎಂಬುವವರು ನಮ್ಮನ್ನು ಕರೆದುಕೊಂಡು ಬಂದರು. ನಂತರ ಬೆಳಂದೂರು ಎಂ.ಎಫ್.ನಲ್ಲಿ ಬೀಟೆ ಮರವನ್ನು ಕಡಿದು ಓಮ್ನಿಗೆ ಹಾಕಿಕೊಂಡು ಬರುತ್ತಿರುವಾಗ ಮರಕ್ಕೆ ಹೊಡೆದು ನಿಂತಿದೆಂದು ತಿಳಿಸಿದರು. ಇದು ಅಕ್ರಮ ಸಾಗಾಣಿಕೆ ಎಂದು ಪರಿಗಣಿಸಿ, ವಾಹನ ಮತ್ತು ಬೀಟೆ ನಾಟಾವನ್ನು ಪ್ರಥಮ ವರ್ತಮಾನ ವರದಿ, ಮಹಜರ್ ವರದಿ, ಜಪ್ತಿ ವರದಿಯೊಂದಿಗೆ ಇಲಾಖಾ ಪರ ಜಪ್ತುಮಾಡಿ, ಕರ್ನಾಟಕ ಅರಣ್ಯ ಕಾಯ್ದೆ 1963 ಸೆಕ್ಷನ್ 24, 62, 71(ಎ), 104 (ಎ) ಮತ್ತು ಕರ್ನಾಟಕ ಅರಣ್ಯ ಕಾನೂನು 1969ರ ಉಪ ನಿಯಮ 144, 165ರ ಪ್ರಕಾರ ಅಂಬ್ಲಿಗೊಳ ವಲಯದ ಅರಣ್ಯ ಮೊಕದ್ದಮೆ ಸಂಖ್ಯೆ:32/10–11ನ್ನು ದಾಖಲಿಸಿ ವಾಹನವನ್ನು ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಇವರ ಸಮಕ್ಷಮ ಹಾಜರ್ಪಡಿಸಿರುತ್ತಾರೆ. ನಂತರ ಈ ವಾಹನವನ್ನು ಸರ್ಕಾರಿ ನಾಟಾ ಸಂಗ್ರಹಾಲಯದಲ್ಲಿರುವ ವಾಹನ ಶೆಡ್ಡಿನಲ್ಲಿ ಸುರಕ್ಷತೆಗಾಗಿಡಲು ವಲಯ ಅರಣ್ಯಾಧಿಕಾರಿ, ಸರ್ಕಾರಿ ನಾಟಾ ಸಂಗ್ರಹಾಲಯ, ಸಾಗರ ಇವರ ಸುಪರ್ಧಿಗೆ ಕೊಡಲು ಆದೇಶವಾಗಿದೆ.

ಈ ಪ್ರಕರಣದಲ್ಲಿ ವಲಯ ಅರಣ್ಯಾಧಿಕಾರಿ, ಅಂಬ್ಲಿಗೊಳ ವಲಯ, ಇವರು ವಿಚಾರಣಾ ವರದಿ ಸಲ್ಲಿಸಿ ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಮತ್ತು ಆರೋಪಿಗಳ ವಿರುದ್ದ ನ್ಯಾಯಾಲಯಕ್ಕೆ ದೋಷರೋಪಣಾ ಪಟ್ಟಿ ಸಲ್ಲಿಸಲು ಅನುಮತಿ ಕೋರಿರುತ್ತಾರೆ.

ನಂತರ ಈ ವಾಹನದ 'ಬಿ' ಎಕ್ಸ್‌ಟ್ರ್ಯಾಕ್ಟ್ ಈ ನ್ಯಾಯಾಲಯಕ್ಕೆ ಒದಗಿಸಲು The Director of Transport Commissioner Panaji, Goa ಇವರಿಗೆ ಈ ನ್ಯಾಯಾಲಯದ ಪತ್ರ ಸಂ:ಬಿ3.ಅಮೊ.ವಾಹನ.ಸಿಆರ್.06/10–11ನ್ನು ದಿ:01–07–2010 ರಂದು ಬರೆದು ಕೋರಲಾಯಿತು. ಇವರು ಈ ವಾಹನದ ಸಿ.ಸಿ.ಯನ್ನು ದಿ:10–07–2008 ರಂದು ಸಾರಿಗೆ ಕಛೇರಿ, ಸಾಗರಕ್ಕೆ ವರ್ಗಾಯಿಸಿದ ಬಗ್ಗೆ ತಿಳಿಸಿರುತ್ತಾರೆ. ಅದರಂತೆ, ಈ ನ್ಯಾಯಾಲಯದ ಪತ್ರ ಸಮ ಸಂಖ್ಯೆ ದಿ:29–07–2010 ರಂದು ಸಾರಿಗೆ ಅಧಿಕಾರಿ, ಸಾಗರ ಇವರಿಗೆ ಪತ್ರ ಬರೆದು ಈ ವಾಹನದ 'ಬಿ' ಎಕ್ಸ್‌ಟ್ರಾಕ್ಸ್‌ನ್ನು ಒದಗಿಸಲು ಕೋರಲಾಯಿತು. ಅದರಂತೆ ಈ ವಾಹನದ 'ಬಿ' ಎಕ್ಸ್‌ಟ್ರಾಕ್ಸ್‌ನ್ನು ದಿ:07–08–2010ರ ಪತ್ರದಲ್ಲಿ ಈ ನ್ಯಾಯಾಲಯಕ್ಕೆ ಒದಗಿಸಿರುತ್ತಾರೆ. 'ಬಿ' ಎಕ್ಸ್‌ಟ್ರಾಕ್ಸ್‌ನಲ್ಲಿ ನಮೂದಿಸಿದ ಆರ್.ಸಿ. ಮಾಲೀಕರ ಹೆಸರು ಶ್ರೀ ಸಿಧಿಕ್ ಅಹ್ಮದ್ ಬಿನ್ ಮೊಹಮ್ಮದ್ ಗೌಸ್, ಹೈಯರ್ ಪ್ರೇಮರಿ ಸ್ಕೂಲ್ ಹತ್ತಿರ, ಶಿಕಾರಿಪುರ ಇವರಿಗೆ ದಿ:26–08–2010 ರಂದು ಕರ್ನಾಟಕ ಅರಣ್ಯ ಕಾಯಿದೆ 1963 ಸೆಕ್ಷನ್ 71ಬಿ(1)ರ ಪ್ರಕಾರ ಈ ವಾಹನದ ದಾಖಲೆಗಳನ್ನು ಈ ನ್ಯಾಯಾಲಯಕ್ಕೆ ಹಾಜರ್ಪಡಿಸಲು 30 ದಿನಗಳ ಕಾಲಾವಕಾಶ ನೀಡಿ ನೋಟಿಸ್‌ನ್ನು ನೊಂದಣಿ ಅಂಚೆ ಮೂಲಕ ಜಾರಿ ಮಾಡಿದೆ. ಆದರೂ ಸಹ ಈ ವಾಹನವನ್ನು ಬಿಡಿಸಿಕೊಳ್ಳಲು ಆರ್.ಸಿ. ಮಾಲೀಕರಾಗಲೀ ಅವರ ಪರ ವಕೀಲರಾಗಲೀ ಇಲ್ಲಿಯವರೆಗೆ ಹಕ್ಕುಬಾಧ್ಯತೆಯ ಅರ್ಜಿಯನ್ನು ಈ ನ್ಯಾಯಾಲಯಕ್ಕೆ ಸಲ್ಲಿಸಿರುವುದಿಲ್ಲ.

ಈ ನಡುವೆ ಈ ವಾಹನದ ಬಗ್ಗೆ ಹೆಚ್ಚಿನ ಪ್ರಚಾರಕ್ಕಾಗಿ ಈ ನ್ಯಾಯಾಲಯದಿಂದ 30 ದಿನಗಳ ಕಾಲಾವಕಾಶ ನೀಡಿ ಸಂಖ್ಯೆ:ಬಿ3:ಅಮೊ:ವಾಹನ:ಸಿಆರ್:19/10–11/ದಿ:01–07–2010ರಂದು ಪ್ರಕಟಣೆಯನ್ನು ಹೊರಡಿಸಿ ಪ್ರತಿಯನ್ನು ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ ವಿಭಾಗ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಹಾಗೂ ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ, ಬೆಂಗಳೂರು ಇವರಿಗೆ ಕಳುಹಿಸಿ ರಾಜ್ಯ ಮಟ್ಟದ ಪ್ರಚಲಿತ ದೈನಿಕ ಪತ್ರಿಕೆಯಲ್ಲಿ ಪ್ರಕಟಿಸಲು ಕೋರಲಾಗಿತ್ತು. ಅದರಂತೆ ಈ ಪ್ರಕಟಣೆಯು ದಿ:17–07–2010ರಂದು ವಿಜಯ ಕರ್ನಾಟಕ ದಿನಪತ್ರಿಕೆಯಲ್ಲಿ ಮತ್ತು ದಿ:19–08–2010ರಂದು ರಾಜ್ಯ ಗೆಜೆಟ್ ಪತ್ರಿಕೆಯಲ್ಲಿ ಪ್ರಕಟಗೊಂಡು 30 ದಿನಗಳಾದರು ವಾಹನ ಮಾಲೀಕರಾಗಲೀ ಅಥವಾ ಅವರ ಪರ ವಕೀಲರಾಗಲೀ ಈ ನ್ಯಾಯಾಲಯಕ್ಕೆ ಹಕ್ಕುಬಾಧ್ಯತೆಯ ಅರ್ಜಿ ಸಲ್ಲಿಸಿರುವುದಿಲ್ಲ.

ಸಹಾಯಕ ಸರ್ಕಾರಿ ಅಭಿಯೋಜಕರು ದಿ:26–02–2011 ರಂದು ವಾದ ಮಂಡಿಸಿ, ಸದರಿ ವಾಹನದಲ್ಲಿ ಅರಣ್ಯ ಉತ್ಪನ್ನವನ್ನು ಸಾಗಿಸುತ್ತಿರುವಾಗ ಮಾಲು ಸಹಿತ ವಲಯ ಅರಣ್ಯಾಧಿಕಾರಿ, ಅಂಬ್ಲಿಗೊಳ ವಲಯ, ಇವರು ವಾಹನವನ್ನು ಜಪ್ತುಮಾಡಿ ಮಹಜರ್ ಪ್ರತಿ ಮತ್ತು ಪ್ರಥಮ ವರ್ತಮಾನ ವರದಿ, ಜಪ್ತಿ ವರದಿಯನ್ನು ಈ ನ್ಯಾಯಾಲಯಕ್ಕೆ ಹಾಜರ್ಪಡಿಸಿರುವುದರಿಂದ ಈ ವಾಹನದಲ್ಲಿ ಬೀಟೆ ತುಂಡುಗಳನ್ನು ಅಕ್ರಮವಾಗಿ ಸಾಗಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಕೋರಿರುತ್ತಾರೆ.

ಈ ಪ್ರಕರಣದ ಎಲ್ಲಾ ದಾಖಲೆಗಳನ್ನು ಪರಿಶೀಲಿಸಿ, ಅಭಿಯೋಜಕರ ವಾದವನ್ನು ಕೇಳಿದೆ. ಹಾಗೂ ಈ ವಾಹನದ ಬಗ್ಗೆ ಪತ್ರಿಕಾ ಪ್ರಕಟಣೆ ಹೊರಡಿಸಿರುತ್ತದೆ. ಈ ಪ್ರಕಟಣೆಯು ರಾಜ್ಯ ಗೆಜೆಟ್‌ನಲ್ಲಿ ಮತ್ತು ದಿನಪತ್ರಿಕೆಯಲ್ಲಿ ಪ್ರಕಟಗೊಂಡು ಮತ್ತು ಆರ್.ಸಿ. ಮಾಲೀಕರಿಗೆ ನೋಟಿಸ್ ಜಾರಿ ಮಾಡಿ 30 ದಿನಗಳಾದರೂ ಯಾರೂ ಹಕ್ಕು ಬಾಧ್ಯತೆಯ ಅರ್ಜಿಯನ್ನು ಈ ನ್ಯಾಯಾಲಯಕ್ಕೆ ಸಲ್ಲಿಸದೇ ಇದ್ದುದ್ದರಿಂದ ಈ ಪ್ರಕರಣದ ವಿದ್ಯಾಮಾನಗಳನ್ನು ಅರಿತು ಈ ಕೆಳಗಿನಂತೆ ಆದೇಶ ಹೊರಡಿಸಿದೆ.

ಆದೇಶ

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳನ್ನು ಗಣನೆಗೆ ತೆಗೆದುಕೊಂಡು ಶ್ರೀ ಮನೋಜ್ ಕುಮಾರ್ ತ್ರಿಪಾಠಿ, ಭಾ.ಅ.ಸೇ., ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಆದ ನಾನು, ಕರ್ನಾಟಕ ಅರಣ್ಯ ಕಾಯಿದೆ 1963 ಸೆಕ್ಷನ್ 71(ಎ) ರಿಂದ (ಜಿ)ಪ್ರಕಾರ ವಲಯ ಅರಣ್ಯಾಧಿಕಾರಿ, ಅಂಬ್ಲಿಗೊಳ ವಲಯ, ಇವರು ಜಪ್ತು ಮಾಡಿದ ವಾಹನ ಮಾರುತಿ ಓಮ್ನಿ ಜಿಎ–01–ಎನ್–0462 (ಛಾಸ್ಸಿಸ್ ನಂಬರ್ ಮತ್ತು ಇಂಜಿನ್ ನಂಬರ್ ಕಂಡುಬಂದಿರುವುದಿಲ್ಲ) ಮತ್ತು ಈ ವಾಹನದಲ್ಲಿದ್ದ, 04 ತುಂಡು ಬೀಟೆ ಒಟ್ಟು=0.768ಎಂ3ವು ಕರ್ನಾಟಕ ಸರ್ಕಾರದ ಸಂಪತ್ತು ಆಗಿರುವುದರಿಂದ ಅಂತಿಮವಾಗಿ ಮುಟ್ಟುಗೋಲು ಹಾಕಿಕೊಂಡಿರುತ್ತೇನೆ. ಮುಟ್ಟುಗೋಲು ಹಾಕಿಕೊಂಡ ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಅನುಕೂಲಕರವಾಗಿ ವಿಲೇ ಮಾಡಲು ಆದೇಶಿಸಿದ್ದೇನೆ. ಈ ಆದೇಶವನ್ನು ಹೇಳಿ ಬರೆಯಿಸಿ, ಗಣಕಯಂತ್ರದಲ್ಲಿ ಮುದ್ರಿಸಿ, ನಂತರ

ಸರಿಪಡಿಸಿ ದಿ:05–03–2011 ರಂದು ನನ್ನ ಸಹಿ ಹಾಗೂ ಮೊಹರಿನೊಂದಿಗೆ ತೆರೆದ ನ್ಯಾಯಾಲಯದಲ್ಲಿ ಆದೇಶಿಸಿದ್ದೇನೆ. ಈ ಆದೇಶ ಹೊರಡಿಸಿದ 30(ಮೂವತ್ತು) ದಿನಗಳ ಒಳಗಾಗಿ ಯಾರು ಮೇಲ್ಮನವಿ ಸಲ್ಲಿಸದೇ ಹೋದಲ್ಲಿ ಇದೇ ಅಂತಿಮ ಆದೇಶವಾಗಿರುತ್ತದೆ.

ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ
ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ.

ಪಿ.ಆರ್.637

ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಇವರ ನ್ಯಾಯಾಲಯದಲ್ಲಿ

ಬಿ3:ಅಮೊ:ವಾಹನ:ವಿವ: 07/2010–11, ದಿನಾಂಕ:05–03–2011

ಉಪಸ್ಥಿತರು	:	ಶ್ರೀ ಮನೋಜ್ ಕುಮಾರ್ ತ್ರಿಪಾಠಿ, ಭಾ.ಅ.ಸೇ., ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ.
ಫಿರ್ಯಾಧಿದಾರರು	:	ವಲಯ ಅರಣ್ಯಾಧಿಕಾರಿ, ಅಂಬ್ಲಿಗೊಳ ವಲಯ (ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು, ಸಾಗರ)
ಆರೋಪಿಗಳು	:	ಪತ್ತೆಯಾಗಿರುವುದಿಲ್ಲ
ಬಾಧ್ಯತೆದಾರರು	:	ಯಾರು ಮುಂದೆ ಬಂದಿರುವುದಿಲ್ಲ

ಪ್ರಸ್ತಾವನೆ:–

ದಿ:29–06–2010 ರಂದು ಅಂಬ್ಲಿಗೊಳ ವಲಯ, ಸಾಲೂರು ಶಾಖೆ ವನಪಾಲಕ ಮತ್ತು ಸಿಬ್ಬಂದಿಯವರು ಶಿಕಾರಿಪುರ ತಾಲ್ಲೂಕು ಅಂಜನಾಪುರ ಹೋಬಳಿ ಈಸೂರು ಗ್ರಾಮದ ಸಾಲೂರಿನಿಂದ ಈಸೂರಿಗೆ ಹೋಗುವ ಕಚ್ಚಾರಸ್ತೆಯಲ್ಲಿ ಗಸ್ತು ತಿರುಗುತ್ತಿರುವಾಗ ಸಾಲೂರು ಕಡೆಯಿಂದ ಒಂದು ನೀಲಿ ಬಣ್ಣದ ಮಾರುತಿ ಓಮ್ನಿ ವೇಗವಾಗಿ ಬರುತ್ತಿರುವುದನ್ನು ನಿಲ್ಲಿಸಲು ಕೈ ಮಾಡಿದಾಗ ವೇಗವಾಗಿ ಮುಂದೆಸಾಗಿ 50 ಅಡಿ ದೂರದಲ್ಲಿ ವಾಹನ ನಿಲ್ಲಿಸಿ, ಚಾಲಕನ್ನು ವಾಹನದಿಂದ ಇಳಿದು ಓಡಲು ಪ್ರಾರಂಭಿಸಿದಾಗ ಅವನನ್ನು ಬೆನ್ನಟ್ಟಿದ್ದರು. ಕೈಗೆಸಿಗದೇ ಓಡಿ ಪರಾರಿಯಾದರು. ವಾಹನ ಪರಿಶೀಲಿಸಿದಾಗ ಮಾರುತಿ ಓಮ್ನಿ ಆಗಿದ್ದು, ನಂಬರ್: ಜಿಎ–01–ಆರ್–4330 (Chassis No.ST-91-IN-960665, Engine No. Not visible) ಆಗಿದ್ದು, ವಾಹನದೊಳಗಡೆ ಬೀಟೆ ಜಾತಿಯ ಗರಗಸದಿಂದ ಕೊಯ್ತು ಮಾಡಿದ 5 ತುಂಡುಗಳಿದ್ದು, ಅದರ ಅಳತೆ 0.447 ಎಂ3 ಪ್ರಮಾಣವಿದ್ದು, ಈ ತುಂಡುಗಳನ್ನು ಸಾಗಿಸಲು ಯಾವುದೇ ರಹದಾರಿ ಇರಲಿಲ್ಲ. ಹಾಗೂ ಈ ತುಂಡುಗಳಿಗೆ ಇಲಾಖೆಯ ಯಾವುದೇ ಛಾಪಾದ ಗುರುತಿರಲಿಲ್ಲ. ಇದು ಅಕ್ರಮ ಸಾಗಾಣಿಕೆ ಎಂದು ಪರಿಗಣಿಸಿ, ವಾಹನ ಮತ್ತು ಬೀಟೆ ನಾಟಾವನ್ನು ಪ್ರಥಮ ವರ್ತಮಾನ ವರದಿ, ಮಹಜರ್ ವರದಿ, ಜಪ್ತಿ ವರದಿಯೊಂದಿಗೆ ಇಲಾಖಾ ಪರ ಜಪ್ತುಮಾಡಿ, ಕರ್ನಾಟಕ ಅರಣ್ಯ ಕಾಯ್ದೆ 1963 ಸೆಕ್ಷನ್ 24, 62, 71(ಎ), 104(ಎ) ಮತ್ತು ಕರ್ನಾಟಕ ಅರಣ್ಯ ಕಾನೂನು 1969ರ ಉಪ ನಿಯಮ 144, 165ರ ಪ್ರಕಾರ ಅಂಬ್ಲಿಗೊಳ ವಲಯದ ಅರಣ್ಯ ಮೊಕದ್ದಮೆ ಸಂಖ್ಯೆ:34/10–11ನ್ನು ದಾಖಲಿಸಿ ವಾಹನವನ್ನು ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಇವರ ಸಮಕ್ಷಮ ಹಾಜರ್ಪಡಿಸಿರುತ್ತಾರೆ. ನಂತರ ಈ ವಾಹನವನ್ನು ಸರ್ಕಾರಿ ನಾಟಾ ಸಂಗ್ರಹಾಲಯದಲ್ಲಿರುವ ವಾಹನ ಶೆಡ್ಡಿನಲ್ಲಿ ಸುರಕ್ಷತೆಗಾಗಿಡಲು ವಲಯ ಅರಣ್ಯಾಧಿಕಾರಿ, ಸರ್ಕಾರಿ ನಾಟಾ ಸಂಗ್ರಹಾಲಯ, ಸಾಗರ ಇವರ ಸುಪರ್ಧಿಗೆ ಕೊಡಲು ಆದೇಶವಾಗಿದೆ.

ನಂತರ ಈ ಪ್ರಕರಣದಲ್ಲಿ ವಲಯ ಅರಣ್ಯಾಧಿಕಾರಿ, ಅಂಬ್ಲಿಗೊಳ ವಲಯ, ಇವರು ವಿಚಾರಣಾ ವರದಿಯನ್ನು ಈ ನ್ಯಾಯಾಲಯಕ್ಕೆ ಸಲ್ಲಿಸಿ, ವಾಹನ, ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಕೋರಿರುತ್ತಾರೆ.

ನಂತರ ಈ ವಾಹನದ ಬಿ ಎಕ್ಸ್‌ಟ್ರ್ಯಾಕ್ಟ್ ಈ ನ್ಯಾಯಾಲಯಕ್ಕೆ ಒದಗಿಸಲು The Director of Transport Commissioner Panaji, Goa ಇವರಿಗೆ ಈ ನ್ಯಾಯಾಲಯದ ಪತ್ರ ಸಂ:ಬಿ3.ಅಮೊ.ವಾಹನ.ಸಿಆರ್.07/10–11ನ್ನು ದಿ:01–07–2010 ರಂದು ಬರೆದು ಕೋರಲಾಯಿತು. ಆದರೆ, ಸಾರಿಗೆ ಅಧಿಕಾರಿಯು ಈ ವಾಹನದ ಬಿ ಎಕ್ಸ್‌ಟ್ರಾಕ್ಸ್‌ನ್ನು ಇಲ್ಲಿಯವರೆಗೆ ಈ ನ್ಯಾಯಾಲಯಕ್ಕೆ ಒದಗಿಸಿರುವುದಿಲ್ಲ.

ಈ ನಡುವೆ ಈ ವಾಹನದ ಬಗ್ಗೆ ಹೆಚ್ಚಿನ ಪ್ರಚಾರಕ್ಕಾಗಿ ಈ ನ್ಯಾಯಾಲಯದಿಂದ 30 ದಿನಗಳ ಕಾಲಾವಕಾಶ ನೀಡಿ ಸಂಖ್ಯೆ:ಬಿ3:ಅಮೊ:ವಾಹನ:ಸಿಆರ್:19/10–11/ದಿ:01–07–2010ರಂದು ಪ್ರಕಟಣೆಯನ್ನು ಹೊರಡಿಸಿ ಪ್ರತಿಯನ್ನು ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ ವಿಭಾಗ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಹಾಗೂ ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ, ಬೆಂಗಳೂರು ಇವರಿಗೆ ಕಳುಹಿಸಿ ರಾಜ್ಯ ಮಟ್ಟದ ಪ್ರಚಲಿತ ದೈನಿಕ ಪತ್ರಿಕೆಯಲ್ಲಿ ಪ್ರಕಟಿಸಲು ಕೋರಲಾಗಿತ್ತು. ಅದರಂತೆ ಈ ಪ್ರಕಟಣೆಯು ದಿ:17–07–2010ರಂದು ವಿಜಯ ಕರ್ನಾಟಕ ದಿನಪತ್ರಿಕೆಯಲ್ಲಿ ಮತ್ತು ದಿ:19–08–2010ರಂದು ರಾಜ್ಯ ಗೆಜೆಟ್ ಪತ್ರಿಕೆಯಲ್ಲಿ ಪ್ರಕಟಗೊಂಡು 30 ದಿನಗಳಾದರು ವಾಹನ ಮಾಲೀಕರಾಗಲೀ ಅಥವಾ ಅವರ ಪರ ವಕೀಲರಾಗಲೀ ಈ ನ್ಯಾಯಾಲಯಕ್ಕೆ ಹಕ್ಕುಬಾಧ್ಯತೆಯ ಅರ್ಜಿ ಸಲ್ಲಿಸಿರುವುದಿಲ್ಲ.

ಸಹಾಯಕ ಸರ್ಕಾರಿ ಅಭಿಯೋಜಕರು ದಿ:26–02–2011 ರಂದು ವಾದ ಮಂಡಿಸಿ, ಸದರಿ ವಾಹನದಲ್ಲಿ ಅರಣ್ಯ ಉತ್ಪನ್ನವನ್ನು ಸಾಗಿಸುತ್ತಿರುವಾಗ ಮಾಲು ಸಹಿತ ವಲಯ ಅರಣ್ಯಾಧಿಕಾರಿ, ಅಂಬ್ಲಿಗೊಳ ವಲಯ, ಇವರು ವಾಹನವನ್ನು ಜಪ್ತುಮಾಡಿ ಮಹಜರ್ ಪ್ರತಿ ಮತ್ತು ಪ್ರಥಮ ವರ್ತಮಾನ ವರದಿ, ಜಪ್ತಿ ವರದಿಯನ್ನು ಈ ನ್ಯಾಯಾಲಯಕ್ಕೆ ಹಾಜರ್ಪಡಿಸಿರುವುದರಿಂದ ಈ ವಾಹನದಲ್ಲಿ ಬೀಟೆ ತುಂಡುಗಳನ್ನು ಅಕ್ರಮವಾಗಿ ಸಾಗಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಕೋರಿರುತ್ತಾರೆ.

ಈ ಪ್ರಕರಣದ ಎಲ್ಲಾ ದಾಖಲೆಗಳನ್ನು ಪರಿಶೀಲಿಸಿ, ಅಭಿಯೋಜಕರ ವಾದವನ್ನು ಕೇಳಿದೆ. ಹಾಗೂ ಈ ವಾಹನದ ಬಗ್ಗೆ ಪತ್ರಿಕಾ ಪ್ರಕಟಣೆ ಹೊರಡಿಸಿರುತ್ತದೆ. ಈ ಪ್ರಕಟಣೆಯು ರಾಜ್ಯ ಗೆಜೆಟ್‌ನಲ್ಲಿ ಮತ್ತು ದಿನಪತ್ರಿಕೆಯಲ್ಲಿ ಪ್ರಕಟಗೊಂಡು 30 ದಿನಗಳಾದರೂ ಯಾರೂ ಹಕ್ಕು ಬಾಧ್ಯತೆಯ ಅರ್ಜಿಯನ್ನು ಈ ನ್ಯಾಯಾಲಯಕ್ಕೆ ಸಲ್ಲಿಸದೇ ಇದ್ದುದ್ದರಿಂದ ಈ ಪ್ರಕರಣದ ವಿದ್ಯಾಮಾನಗಳನ್ನು ಅರಿತು ಈ ಕೆಳಗಿನಂತೆ ಆದೇಶ ಹೊರಡಿಸಿದೆ.

ಆದೇಶ

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳನ್ನು ಗಣನೆಗೆ ತೆಗೆದುಕೊಂಡು ಶ್ರೀ ಮನೋಜ್ ಕುಮಾರ್ ತ್ರಿಪಾಠಿ, ಭಾ.ಅ.ಸೇ., ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಆದ ನಾನು, ಕರ್ನಾಟಕ ಅರಣ್ಯ ಕಾಯಿದೆ 1963 ಸೆಕ್ಷನ್ 71(ಎ) ರಿಂದ (ಜಿ)ಪ್ರಕಾರ ವಲಯ ಅರಣ್ಯಾಧಿಕಾರಿ, ಅಂಬ್ಲಿಗೊಳ ವಲಯ, ಇವರು ಜಪ್ತು ಮಾಡಿದ ವಾಹನ ಮಾರುತಿ ಓಮ್ನಿ ಜಿಎ–01–ಆರ್–4330 (ಛಾಸ್ಸಿಸ್ ನಂ: ST-91-IN-960665, ಇಂಜಿನ್ ನಂ:Not Visible)ನ್ನು ಮತ್ತು ಈ ವಾಹನದಲ್ಲಿದ್ದ, 05 ತುಂಡು ಬೀಟೆ ಒಟ್ಟು=0.447ಎಂ3ವು ಕರ್ನಾಟಕ ಸರ್ಕಾರದ ಸಂಪತ್ತು ಆಗಿರುವುದರಿಂದ ಅಂತಿಮವಾಗಿ ಮುಟ್ಟುಗೋಲು ಹಾಕಿಕೊಂಡಿರುತ್ತೇನೆ. ಮುಟ್ಟುಗೋಲು ಹಾಕಿಕೊಂಡ ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಅನುಕೂಲಕರವಾಗಿ ವಿಲೇ ಮಾಡಲು ಆದೇಶಿಸಿದ್ದೇನೆ. ಈ ಆದೇಶವನ್ನು ಹೇಳಿ ಬರೆಯಿಸಿ, ಗಣಕಯಂತ್ರದಲ್ಲಿ ಮುದ್ರಿಸಿ, ನಂತರ ಸರಿಪಡಿಸಿ **ದಿ:05–03–2011** ರಂದು ನನ್ನ ಸಹಿ ಹಾಗೂ ಮೊಹರಿನೊಂದಿಗೆ ತೆರೆದ ನ್ಯಾಯಾಲಯದಲ್ಲಿ ಆದೇಶಿಸಿದ್ದೇನೆ. ಈ ಆದೇಶ ಹೊರಡಿಸಿದ 30(ಮೂವತ್ತು) ದಿನಗಳ ಒಳಗಾಗಿ ಯಾರು ಮೇಲ್ಮನವಿ ಸಲ್ಲಿಸದೇ ಹೋದಲ್ಲಿ ಇದೇ ಅಂತಿಮ ಆದೇಶವಾಗಿರುತ್ತದೆ.

ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ
ಪಿ.ಆರ್.645 ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ.

ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಇವರ ನ್ಯಾಯಾಲಯದಲ್ಲಿ

ಬಿ3:ಅಮೊ:ವಾಹನ:ವಿವ:08/10–11, ದಿನಾಂಕ:05–03–2011

ಉಪಸ್ಥಿತರು : ಶ್ರೀ ಮನೋಜ್ ಕುಮಾರ್ ತ್ರಿಪಾಠಿ, ಭಾ.ಅ.ಸೇ.,
ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ.

ಫಿರ್ಯಾಧಿದಾರರು : ವಲಯ ಅರಣ್ಯಾಧಿಕಾರಿ,
ಅಂಬ್ಲಿಗೊಳ ವಲಯ, ಅಂಬ್ಲಿಗೊಳ (ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು, ಸಾಗರ)

ಆರೋಪಿಗಳು : ಪತ್ತೆಯಾಗಿಲ್ಲ.

ಭಾದ್ಯತೆದಾರರು : ಯಾರೂ ಹಕ್ಕುಬಾಧ್ಯತೆಯ ಅರ್ಜಿ ಸಲ್ಲಿಸಿಲ್ಲ.

ಪ್ರಸ್ತಾವನೆ:–

ದಿ:06–07–2010 ರಂದು ಅಂಬ್ಲಿಗೊಳ ವಲಯದ, ಅಂಬ್ಲಿಗೊಳ ಶಾಖೆಯ ವನಪಾಲಕ ಮತ್ತು ಸಿಬ್ಬಂದಿಯವರು ಸಾಗರ ತಾ॥ ಆನಂದಪುರಂ ಹೋಬಳಿ ಕುಡಿಗೆರೆ ಗ್ರಾಮ ಸ.ನಂ. 120 ರಲ್ಲಿ ಗಸ್ತು ತಿರುಗುತ್ತಾ ಕುಡಿಗೆರೆ ಗ್ರಾಮದಿಂದ ಸಾವೇಹಕ್ಕಲು ಕಡೆಗೆ ಹೋಗುತ್ತಿರುವಾಗ ಬೆಳಿಗ್ಗೆ ಸುಮಾರು 5–00 ಗಂಟೆ ಸಮಯದಲ್ಲಿ ಒಂದು ವಾಹನ ಹೆಡ್ ಲೈಟ್ ಹಾಕಿಕೊಂಡು ಬರುತ್ತಿರುವುದನ್ನು ನೋಡಿ ತಪಾಸಣೆಗೆ ವಾಹನದ ಹತ್ತಿರ ಹೋಗಲು ವಾಹನದೊಳಗಿದ್ದ 4–5 ಜನ ಕಾಡಿನಲ್ಲಿ ಓಡಿ ಕೈಗೆ ಸಿಗದೇ ಪರಾರಿಯಾದರು. ವಾಹನದ ಬಳಿ ಬಂದು ಪರಿಶೀಲಿಸಿ ನೋಡಲಾಗಿ ಬಿಳಿ ಬಣ್ಣದ ಮಾರುತಿ ವ್ಯಾನ್ ನಂ:ಜಿಎ–01–ಎನ್–2892 ಆಗಿದ್ದು, ವಾಹನದೊಳಗಡೆ ಬೀಟೆ ನಾಟಾ 8 ಇದ್ದು, ಅದರ ಅಳತೆ 0.637 ಎಂ3 ಪ್ರಮಾಣವಿದ್ದು, ಈ ತುಂಡುಗಳನ್ನು ಗರಗಸದಿಂದ ಕೊಯ್ತು ಮಾಡಿದಾಗಿದ್ದು, ಇದನ್ನು ಮರಗಳ್ಳರು ಕಳ್ಳಸಾಗಾಣಿಕೆ ಮಾಡುತ್ತಿರುವಾಗ ಇಲಾಖೆಯವರನ್ನು ಕಂಡು ಬಿಟ್ಟು ಓಡಿರುತ್ತಾರೆ. ಇದು ಅಕ್ರಮ ಸಾಗಾಣಿಕೆ ಎಂದು ಪರಿಗಣಿಸಿ, ವಾಹನ ಮತ್ತು ಅರಣ್ಯ ಉತ್ಪನ್ನಗಳಿಗೆ ಪ್ರಥಮ ವರ್ತಮಾನ ವರದಿ, ಮಹಜರ್ ವರದಿ, ಜಪ್ತು ವರದಿಯೊಂದಿಗೆ ವಾಹನ ಮತ್ತು ವಾಹನದಲ್ಲಿದ್ದ ಅರಣ್ಯ ಉತ್ಪನ್ನವನ್ನು ಇಲಾಖಾ ಪರ ಜಪ್ತುಮಾಡಿ ಕರ್ನಾಟಕ ಅರಣ್ಯ ಕಾಯ್ದೆ 1963 ಸೆಕ್ಷನ್ 24, 62, 71(ಎ), 104(ಎ) ಮತ್ತು ಕರ್ನಾಟಕ ಅರಣ್ಯ ಕಾನೂನು 1969ರ ಉಪನಿಯಮ 144, 165ರ ಪ್ರಕಾರ ಅಂಬ್ಲಿಗೊಳ ವಲಯದ ಅರಣ್ಯ ಮೊಕದ್ದಮೆ ಸಂಖ್ಯೆ:35/10–11ನ್ನು ದಾಖಲಿಸಿ, ವಾಹನವನ್ನು ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಇವರ ಸಮಕ್ಷಮ ಹಾಜರ್ಪಡಿಸಿರುತ್ತಾರೆ. ನಂತರ ಈ ವಾಹನವನ್ನು ಸರ್ಕಾರಿ ನಾಟಾ ಸಂಗ್ರಹಾಲಯದಲ್ಲಿರುವ ವಾಹನ ಶೆಡ್ಡಿನಲ್ಲಿ ಸುರಕ್ಷತೆಗಾಗಿ ಇಡಲು ವಲಯ ಅರಣ್ಯಾಧಿಕಾರಿ, ಸರ್ಕಾರಿ ನಾಟಾ ಸಂಗ್ರಹಾಲಯ, ಸಾಗರ ಇವರ ಸುಪರ್ಧಿಗೆ ಕೊಡಲು ಆದೇಶವಾಗಿದೆ.

ಈ ಪ್ರಕರಣದಲ್ಲಿ ವಲಯ ಅರಣ್ಯಾಧಿಕಾರಿ, ಅಂಬ್ಲಿಗೊಳ ವಲಯ, ಇವರು ಈ ನ್ಯಾಯಾಲಯಕ್ಕೆ ವಿಚಾರಣಾ ವರದಿಯನ್ನು ಸಲ್ಲಿಸಿ, ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಕೋರಿರುತ್ತಾರೆ.

ಈ ವಾಹನದ ಬಿ ವರದಿಯನ್ನು ಈ ನ್ಯಾಯಾಲಯಕ್ಕೆ ಒದಗಿಸಲು The Director of Transport Commissioner, Panji Goa ಇವರಿಗೆ ನ್ಯಾಯಾಲಯದಿಂದ ಸಂ:ಬಿ3.ಅಮೊ.ವಾಹನ.ಸಿಅರ್.08/10–11ದಿ:07–07–2010 ರಂದು ಪತ್ರ ಬರೆದು ಕೋರಲಾಗಿದೆ. ಆದರೆ, ಅವರಿಂದ ಇಲ್ಲಿಯವರೆಗೂ ಈ ವಾಹನದ ಬಿ ವರದಿಯನ್ನು ಈ ನ್ಯಾಯಾಲಯಕ್ಕೆ ಒದಗಿಸಿರುವುದಿಲ್ಲ.

ಈ ನಡುವೆ ಈ ವಾಹನದ ಬಗ್ಗೆ ಹೆಚ್ಚಿನ ಪ್ರಚಾರಕ್ಕಾಗಿ ಈ ನ್ಯಾಯಾಲಯದಿಂದ 30 ದಿನಗಳ ಕಾಲಾವಕಾಶ ನೀಡಿ ಸಂಖ್ಯೆ:ಬಿ3:ಅಮೊ:ವಾಹನ:ಸಿಆರ್–22/10–11ದಿ:11–08–2010ರಂದುಪ್ರಕಟಣೆಯನ್ನು ಹೊರಡಿಸಿ ಪ್ರತಿಯನ್ನು ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ ವಿಭಾಗ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಹಾಗೂ ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ, ಬೆಂಗಳೂರು ಇವರಿಗೆ ಕಳುಹಿಸಿ ರಾಜ್ಯ ಮಟ್ಟದ ಪ್ರಚಲಿತ ದೈನಿಕ ಪತ್ರಿಕೆಯಲ್ಲಿ ಪ್ರಕಟಿಸಲು ಕೋರಲಾಗಿತ್ತು. ಅದರಂತೆ ದಿ:24–08–2010 ರಂದು ಸಾಗರ ವಾರ್ತಾ ದಿನಪತ್ರಿಕೆಯಲ್ಲಿ ಮತ್ತು ದಿ:02–09–2010ರಂದು ರಾಜ್ಯ ಗೆಜೆಟ್ ಪತ್ರಿಕೆಯಲ್ಲಿ ಪ್ರಕಟಗೊಂಡು 30 ದಿನಗಳಾದರು ವಾಹನ ಮಾಲೀಕರಾಗಲೀ ಅಥವಾ ಅವರ ಪರ ವಕೀಲರಾಗಲೀ ಈ ನ್ಯಾಯಾಲಯಕ್ಕೆ ಹಕ್ಕುಬಾಧ್ಯತೆಯ ಅರ್ಜಿ ಸಲ್ಲಿಸಿರುವುದಿಲ್ಲ.

ಸಹಾಯಕ ಸರ್ಕಾರಿ ಅಭಿಯೋಜಕರು ದಿ:26–02–2011ರಂದು ವಾದ ಮಂಡಿಸಿ ಈ ವಾಹನದಲ್ಲಿ ಅರಣ್ಯ ಉತ್ಪನ್ನವನ್ನು ಕಳ್ಳ ಸಾಗಾಣಿಕೆ ಮಾಡುತ್ತಿರುವ ಸಮಯದಲ್ಲಿ ವಾಹನವನ್ನು ಅರಣ್ಯ ಉತ್ಪನ್ನದ ಸಮೇತ ವಲಯ ಅರಣ್ಯಾಧಿಕಾರಿ, ಅಂಬ್ಲಿಗೊಳ ವಲಯ, ಇವರು ಜಪ್ತುಮಾಡಿ, ಪ್ರಥಮ ವರ್ತಮಾನ ವರದಿ, ಜಪ್ತಿ ವರದಿ, ಮಹಜರ್ ವರದಿಯನ್ನು ಈ ನ್ಯಾಯಾಲಯಕ್ಕೆ ಹಾಜರ್ಪಡಿಸಿರುತ್ತಾರೆ. ಇದರಿಂದ ಈ ವಾಹನದಲ್ಲಿ ಅರಣ್ಯ ಉತ್ಪನ್ನ ಕಳ್ಳ ಸಾಗಾಣಿಕೆ ಮಾಡಿದ ಬಗ್ಗೆ ಸಾಬೀತಾಗಿದೆ. ಆದ್ದರಿಂದ ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಕೋರಿರುತ್ತಾರೆ.

ಈ ಪ್ರಕರಣದ ಎಲ್ಲಾ ದಾಖಲೆಗಳನ್ನು ಪರಿಶೀಲಿಸಿ, ಅಭಿಯೋಜಕರ ವಾದವನ್ನು ಕೇಳಿದೆ ಮತ್ತು ಈ ವಾಹನದ ಬಗ್ಗೆ ಪತ್ರಿಕಾ ಪ್ರಕಟಣೆ ಹೊರಡಿಸಿರುತ್ತದೆ. ಈ ಪ್ರಕಟಣೆಯು ರಾಜ್ಯ ಗೆಜೆಟ್‌ನಲ್ಲಿ ಪ್ರಕಟಗೊಂಡು 30 ದಿನಗಳಾದರೂ ಯಾರೂ ಹಕ್ಕು ಬಾಧ್ಯತೆಯ ಅರ್ಜಿಯನ್ನು ಈ ನ್ಯಾಯಾಲಯಕ್ಕೆ ಸಲ್ಲಿಸದೇ ಇದ್ದುದ್ದರಿಂದ ಈ ಪ್ರಕರಣದ ವಿದ್ಯಾಮಾನಗಳನ್ನು ಅರಿತು ಈ ಕೆಳಗಿನಂತೆ ಆದೇಶ ಹೊರಡಿಸಿದೆ.

ಆದೇಶ

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳನ್ನು ಗಣನೆಗೆ ತೆಗೆದುಕೊಂಡು ಶ್ರೀ ಮನೋಜ್ ಕುಮಾರ ತ್ರಿಪಾಠಿ, ಭಾ.ಅ.ಸೇ., ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಆದ ನಾನು, ಕರ್ನಾಟಕ ಅರಣ್ಯ ಕಾಯಿದೆ 1963 ಸೆಕ್ಷನ್ 71(ಎ) ರಿಂದ (ಜಿ) ಕಾಯಿದೆ ಪ್ರಕಾರ ವಲಯ ಅರಣ್ಯಾಧಿಕಾರಿ, ಅಂಬ್ಲಿಗೊಳ ವಲಯ, ಇವರು ಜಪ್ತು ಮಾಡಿದ ವಾಹನ ಮಾರುತಿ ವ್ಯಾನ್ ಜಿಎ–01 ಎನ್–2892, ಮತ್ತು ಈ ವಾಹನದಲ್ಲಿದ್ದ ಬೀಟೆ ನಾಟಾ 08=0.637 ಎಂ3ನ್ನು ಕರ್ನಾಟಕ ಸರ್ಕಾರದ ಸಂಪತ್ತು ಆಗಿರುವುದರಿಂದ ಅಂತಿಮವಾಗಿ ಮುಟ್ಟುಗೋಲು ಹಾಕಿಕೊಂಡಿರುತ್ತೇನೆ. ಮುಟ್ಟುಗೋಲು ಹಾಕಿಕೊಂಡ ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಅನುಕೂಲಕರವಾಗಿ ವಿಲೇ ಮಾಡಲು ಆದೇಶಿಸಿದ್ದೇನೆ. ಈ ಆದೇಶವನ್ನು ಹೇಳಿ ಬರೆಯಿಸಿ, ಗಣಕಯಂತ್ರದಲ್ಲಿ ಮುದ್ರಿಸಿ, ನಂತರ ಸರಿಪಡಿಸಿ ದಿ:05–03–2011 ರಂದು ನನ್ನ ಸಹಿ ಹಾಗೂ ಮೊಹರಿನೊಂದಿಗೆ ತೆರೆದ ನ್ಯಾಯಾಲಯದಲ್ಲಿ ಆದೇಶಿಸಿದ್ದೇನೆ. ಈ ಆದೇಶ ಹೊರಡಿಸಿದ 30 (ಮೂವತ್ತು) ದಿನಗಳ ಒಳಗಾಗಿ ಯಾರು ಮೇಲ್ಮನವಿ ಸಲ್ಲಿಸದೇ ಹೋದಲ್ಲಿ ಇದೇ ಅಂತಿಮ ಆದೇಶವಾಗಿರುತ್ತದೆ.

ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ
ಪಿ.ಆರ್.646 ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ.

ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಇವರ ನ್ಯಾಯಾಲಯದಲ್ಲಿ

ಬಿ3:ಅಮೊ:ವಾಹನ:ವಿವ:11/10–11, ದಿನಾಂಕ:05–03–2011

ಉಪಸ್ಥಿತರು : ಶ್ರೀ ಮನೋಜ್ ಕುಮಾರ್ ತ್ರಿಪಾಠಿ, ಭಾ.ಅ.ಸೇ.,
ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಣ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ.

ಫಿರ್ಯಾಧಿದಾರರು : ವಲಯ ಅರಣ್ಯಾಧಿಕಾರಿ,
ಶಿಕಾರಿಪುರ ವಲಯ, ಶಿಕಾರಿಪುರ (ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು, ಸಾಗರ)

ಆರೋಪಿಗಳು : ಪತ್ತೆಯಾಗಿಲ್ಲ

ಭಾಧ್ಯತೆದಾರರು : ಯಾರೂ ಹಕ್ಕುಬಾಧ್ಯತೆಯ ಅರ್ಜಿ ಸಲ್ಲಿಸಿಲ್ಲ.

ಪ್ರಸ್ತಾವನೆ:–

ದಿ:24–07–2010 ರಂದು ಶಿಕಾರಿಪುರ ವಲಯದ ವಲಯ ಅರಣ್ಯಾಧಿಕಾರಿ ಮತ್ತು ಸಿಬ್ಬಂದಿಯವರು ಶಿಕಾರಿಪುರ ತಾಲ್ಲೂಕು ಕಾಳೆನಹಳ್ಳಿ ಸಮೀಪ ಬಸ್‌ನಿಲ್ದಾಣದ ಬಳಿ ಗಸ್ತು ಕಾಯುತ್ತಿರುವಾಗ ರಸ್ತೆಯಲ್ಲಿ ಬರುವ ಎಲ್ಲಾ ವಾಹನಗಳನ್ನು ತಪಾಸಣೆ ಮಾಡುತ್ತಿರುವಾಗ ಬೆಳಗಿನ ಜಾವ ಸುಮಾರು 4–00 ಗಂಟೆ ಸಮಯದಲ್ಲಿ ಆನಂದಪುರಂ ಕಡೆಯಿಂದ ಶಿಕಾರಿಪುರ ಕಡೆಗೆ ಒಂದು ನೀಲಿ ಬಣ್ಣದ ಮಾರುತಿ ವ್ಯಾನ್ ಜಿಎ–02–ಎ–9952 ಬರುತ್ತಿರುವುದನ್ನು ನಿಲ್ಲಿಸಲು ಬ್ಯಾಟರಿ ಬೆಳಕಿನಿಂದ ಸೂಚಿಸಿದರು. ನಿಲ್ಲಿಸದೇ ವೇಗವಾಗಿ ಮುಂದೆ ಸಾಗಿದಾಗ ಇಲಾಖಾ ವಾಹನದಲ್ಲಿ ಬೆನ್ನಟ್ಟಿ ವಾಹನವನ್ನು ಗಾಮ ಕ್ರಾಸ್ ಬಳಿ ನಿಲ್ಲಿಸಿ, ವಾಹನದಲ್ಲಿದ್ದ ಆಸಾಮಿಗಳು ಯಾರು ಕೈಗೆ ಸಿಗದೇ ಕತ್ತಲೆಯಲ್ಲಿ ಪರಾರಿಯಾದರು. ನಂತರ ವಾಹನ ಪರಿಶೀಲಿಸಲಾಗಿ, ಅದರೊಳಗಡೆ ಸಾಗುವಾನಿ 1 ಎಳೆ ಮತ್ತು ಸಾಗುವಾನಿ ನಾಟಾ 10=0.694 ಎಂ3 ಪ್ರಮಾಣವಿದ್ದು, ಈ ನಾಟಾಗಳ ಮೇಲೆ ಇಲಾಖೆಯ ಛಾಪಾದ ಗುರುತಿರಲಿಲ್ಲ. ಆದ್ದರಿಂದ ಇದು ಅಕ್ರಮ ಸಾಗಾಣಿಕೆ ಎಂದು ಪರಿಗಣಿಸಿ, ವಾಹನ ಮತ್ತು ಅರಣ್ಯ ಉತ್ಪನ್ನಗಳಿಗೆ ಪ್ರಥಮ ವರ್ತಮಾನ ವರದಿ, ಮಹಜರ್ ವರದಿ, ಜಪ್ತು ವರದಿಯೊಂದಿಗೆ ವಾಹನ ಮತ್ತು ವಾಹನದಲ್ಲಿದ್ದ ಅರಣ್ಯ ಉತ್ಪನ್ನವನ್ನು ಇಲಾಖಾ ಪರ ಜಪ್ತುಮಾಡಿ ಕರ್ನಾಟಕ ಅರಣ್ಯ ಕಾಯ್ದೆ 1963 ಸೆಕ್ಷನ್ 24, 50(ಕೆ), 62, 71(ಎ) ರಿಂದ (ಜಿ) ಮತ್ತು ಕರ್ನಾಟಕ ಅರಣ್ಯ ಕಾನೂನು 1969ರ ಉಪನಿಯಮ 144, 165ರ ಪ್ರಕಾರ ಶಿಕಾರಿಪುರ ವಲಯದ ಅರಣ್ಯ ಮೊಕದ್ದಮೆ ಸಂಖ್ಯೆ:18/10–11ನ್ನು ದಾಖಲಿಸಿ, ವಾಹನವನ್ನು ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಇವರ ಸಮಕ್ಷಮ ಹಾಜರ್ಪಡಿಸಿರುತ್ತಾರೆ. ನಂತರ ಈ ವಾಹನವನ್ನು ಸರ್ಕಾರಿ ನಾಟಾ ಸಂಗ್ರಹಾಲಯದಲ್ಲಿರುವ ವಾಹನ ಶೆಡ್ಡಿನಲ್ಲಿ ಸುರಕ್ಷತೆಗಾಗಿ ಇಡಲು ವಲಯ ಅರಣ್ಯಾಧಿಕಾರಿ, ಸರ್ಕಾರಿ ನಾಟಾ ಸಂಗ್ರಹಾಲಯ, ಸಾಗರ ಇವರ ಸುಪರ್ಧಿಗೆ ಕೊಡಲು ಆದೇಶವಾಗಿದೆ.

ವಲಯ ಅರಣ್ಯಾಧಿಕಾರಿ, ಶಿಕಾರಿಪುರ ವಲಯ, ಇವರು ಈ ಪ್ರಕರಣದಲ್ಲಿ ವಿಚಾರಣಾ ವರದಿಯನ್ನು ಈ ನ್ಯಾಯಾಲಯಕ್ಕೆ ಸಲ್ಲಿಸಿ, ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಕೋರಿರುತ್ತಾರೆ.

ಈ ವಾಹನದ ಬಿ ವರದಿಯನ್ನು ಈ ನ್ಯಾಯಾಲಯಕ್ಕೆ ಒದಗಿಸಲು The Director of Transport Commissioner, Panji Goa ಇವರಿಗೆ ನ್ಯಾಯಾಲಯದ ಪತ್ರ ಸಂ:ಬಿ3.ಅಮೊ.ವಾಹನ.ಸಿಅರ್.11/10–11ದಿ:29–07–2010 ರಂದು ಪತ್ರ ಬರೆದು ಕೋರಲಾಗಿದೆ. ಆದರೆ, ಅವರಿಂದ ಇಲ್ಲಿಯವರೆಗೂ ಈ ವಾಹನ ಬಿ ಪ್ರತಿಯನ್ನು ಈ ನ್ಯಾಯಾಲಯಕ್ಕೆ ಸಲ್ಲಿಸಿರುವುದಿಲ್ಲ.

ಈ ನಡುವೆ ಈ ವಾಹನದ ಬಗ್ಗೆ ಹೆಚ್ಚಿನ ಪ್ರಚಾರಕ್ಕಾಗಿ ಈ ನ್ಯಾಯಾಲಯದಿಂದ 30 ದಿನಗಳ ಕಾಲಾವಕಾಶ ನೀಡಿ ಸಂಖ್ಯೆ:ಬಿ3:ಅಮೊ:ವಾಹನ:ಸಿಆರ್–22/10–11ದಿ:11–08–2010ರಂದು ಪ್ರಕಟಣೆಯನ್ನು ಹೊರಡಿಸಿ ಪ್ರತಿಯನ್ನು ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ ವಿಭಾಗ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಹಾಗೂ ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ, ಬೆಂಗಳೂರು ಇವರಿಗೆ ಕಳುಹಿಸಿ ರಾಜ್ಯ ಮಟ್ಟದ ಪ್ರಚಲಿತ ದೈನಿಕ ಪತ್ರಿಕೆಯಲ್ಲಿ ಪ್ರಕಟಿಸಲು ಕೋರಲಾಗಿತ್ತು. ಅದರಂತೆ ದಿ:24–08–2010 ರಂದು ಸಾಗರ ವಾರ್ತಾ ದಿನಪತ್ರಿಕೆಯಲ್ಲಿ ಮತ್ತು ದಿ:02–09–2010ರಂದು ರಾಜ್ಯ ಗೆಜೆಟ್ ಪತ್ರಿಕೆಯಲ್ಲಿ ಪ್ರಕಟಗೊಂಡು 30 ದಿನಗಳಾದರು ವಾಹನ ಮಾಲೀಕರಾಗಲೀ ಅಥವಾ ಅವರ ಪರ ವಕೀಲರಾಗಲೀ ಈ ನ್ಯಾಯಾಲಯಕ್ಕೆ ಹಕ್ಕುಬಾಧ್ಯತೆಯ ಅರ್ಜಿ ಸಲ್ಲಿಸಿರುವುದಿಲ್ಲ.

ಸಹಾಯಕ ಸರ್ಕಾರಿ ಅಭಿಯೋಜಕರು ದಿ:26–02–2011 ರಂದು ವಾದ ಮಂಡಿಸಿ ಈ ವಾಹನದಲ್ಲಿ ಅರಣ್ಯ ಉತ್ಪನ್ನವನ್ನು ಕಳ್ಳ ಸಾಗಾಣಿಕೆ ಮಾಡುತ್ತಿರುವ ಸಮಯದಲ್ಲಿ ವಾಹನವನ್ನು ಅರಣ್ಯ ಉತ್ಪನ್ನದ ಸಮೇತ ವಲಯ ಅರಣ್ಯಾಧಿಕಾರಿ, ಶಿಕಾರಿಪುರ ವಲಯ, ಇವರು ಜಪ್ತುಮಾಡಿ, ಪ್ರಥಮ ವರ್ತಮಾನ ವರದಿ, ಜಪ್ತಿ ವರದಿ, ಮಹಜರ್ ವರದಿಯನ್ನು ಈ ನ್ಯಾಯಾಲಯಕ್ಕೆ ಹಾಜರ್ಪಡಿಸಿರುತ್ತಾರೆ. ಇದರಿಂದ ಈ ವಾಹನದಲ್ಲಿ ಅರಣ್ಯ ಉತ್ಪನ್ನ ಕಳ್ಳ ಸಾಗಾಣಿಕೆ ಮಾಡಿದ ಬಗ್ಗೆ ಸಾಬೀತಾಗಿದೆ. ಆದ್ದರಿಂದ ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಕೋರಿರುತ್ತಾರೆ.

ಈ ಪ್ರಕರಣದ ಎಲ್ಲಾ ದಾಖಲೆಗಳನ್ನು ಪರಿಶೀಲಿಸಿ, ಅಭಿಯೋಜಕರ ವಾದವನ್ನು ಕೇಳಿದೆ ಮತ್ತು ಈ ವಾಹನದ ಬಗ್ಗೆ ಪತ್ರಿಕಾ ಪ್ರಕಟಣೆ ಹೊರಡಿಸಿರುತ್ತದೆ. ಈ ಪ್ರಕಟಣೆಯು ರಾಜ್ಯ ಗೆಜೆಟ್‌ನಲ್ಲಿ ಪ್ರಕಟಗೊಂಡು 30 ದಿನಗಳಾದರೂ ಯಾರೂ ಹಕ್ಕು ಬಾಧ್ಯತೆಯ ಅರ್ಜಿಯನ್ನು ಈ ನ್ಯಾಯಾಲಯಕ್ಕೆ ಸಲ್ಲಿಸದೇ ಇದ್ದುದ್ದರಿಂದ ಈ ಪ್ರಕರಣದ ವಿದ್ಯಾಮಾನಗಳನ್ನು ಅರಿತು ಈ ಕೆಳಗಿನಂತೆ ಆದೇಶ ಹೊರಡಿಸಿದೆ.

ಆದೇಶ

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳನ್ನು ಗಣನೆಗೆ ತೆಗೆದುಕೊಂಡು ಶ್ರೀ ಮನೋಜ್ ಕುಮಾರ ತ್ರಿಪಾಠಿ, ಭಾ.ಅ.ಸೇ., ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಆದ ನಾನು, ಕರ್ನಾಟಕ ಅರಣ್ಯ ಕಾಯಿದೆ 1963 ಸೆಕ್ಷನ್ 71(ಎ) ರಿಂದ (ಜಿ) ಕಾಯಿದೆ ಪ್ರಕಾರ ವಲಯ ಅರಣ್ಯಾಧಿಕಾರಿ, ಶಿಕಾರಿಪುರ ವಲಯ, ಇವರು ಜಪ್ತು ಮಾಡಿದ ವಾಹನ ಮಾರುತಿ ವ್ಯಾನ್ ಜಿಎ–02–ಎ–9952, (ಇಂಜಿನ್ ನಂಬರ್ ಕಾಣಿಸುತ್ತಿಲ್ಲ ಮತ್ತು ಛಾಸ್ಸಿಸ್ ನಂಬರ್ ST-91-IN-723463)ನ್ನು ಮತ್ತು ಈ ವಾಹನದಲ್ಲಿದ್ದ ಸಾಗುವಾನಿ ನಾಟಾ 10=0.694ಎಂ3, ಸಾಗುವಾನಿ ಎಳೆ 1 ಸಂಖ್ಯೆಯನ್ನು ಕರ್ನಾಟಕ ಸರ್ಕಾರದ ಸಂಪತ್ತು ಆಗಿರುವುದರಿಂದ ಅಂತಿಮವಾಗಿ ಮುಟ್ಟುಗೋಲು ಹಾಕಿಕೊಂಡಿರುತ್ತೇನೆ. ಮುಟ್ಟುಗೋಲು ಹಾಕಿಕೊಂಡ ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಅನುಕೂಲಕರವಾಗಿ ವಿಲೇ ಮಾಡಲು ಆದೇಶಿಸಿದ್ದೇನೆ. ಈ ಆದೇಶವನ್ನು ಹೇಳಿ ಬರೆಯಿಸಿ, ಗಣಕಯಂತ್ರದಲ್ಲಿ ಮುದ್ರಿಸಿ, ನಂತರ ಸರಿಪಡಿಸಿ ದಿ:05–03–2011 ರಂದು ನನ್ನ ಸಹಿ ಹಾಗೂ ಮೊಹರಿನೊಂದಿಗೆ ತೆರೆದ ನ್ಯಾಯಾಲಯದಲ್ಲಿ ಆದೇಶಿಸಿದ್ದೇನೆ. ಈ ಆದೇಶ ಹೊರಡಿಸಿದ 30 (ಮೂವತ್ತು) ದಿನಗಳ ಒಳಗಾಗಿ ಯಾರು ಮೇಲ್ಮನವಿ ಸಲ್ಲಿಸದೇ ಹೋದಲ್ಲಿ ಇದೇ ಅಂತಿಮ ಆದೇಶವಾಗಿರುತ್ತದೆ.

ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ
ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ.

ಪಿ.ಆರ್.650

ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಇವರ ನ್ಯಾಯಾಲಯದಲ್ಲಿ

ಬಿ3:ಅಮೊ:ವಾಹನ:ವಿವ:14/10-11, ದಿನಾಂಕ:28–05–2011

ಉಪಸ್ಥಿತರು	: ಶ್ರೀ ಮನೋಜ್ ಕುಮಾರ್ ತ್ರಿಪಾಠಿ, ಭಾ.ಅ.ಸೇ., ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ.
ಪಿರ್ಯಾಧಿದಾರರು	: ವಲಯ ಅರಣ್ಯಾಧಿಕಾರಿ, ಆನವಟ್ಟಿ ವಲಯ, ಆನವಟ್ಟಿ (ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು, ಸಾಗರ)
ಆರೋಪಿಗಳು	: ಪತ್ತೆಯಾಗಿಲ್ಲ
ಭಾದ್ಯತೆದಾರರು	: ಯಾರೂ ಹಕ್ಕುಬಾಧ್ಯತೆಯ ಅರ್ಜಿ ಸಲ್ಲಿಸಿಲ್ಲ.

ಪ್ರಸ್ತಾವನೆ:–

ದಿ:04–08–2010 ರಂದು ಆನವಟ್ಟಿ ವಲಯದ ಬೆಟ್ಟದಕುರ್ಲಿ ಶಾಖೆಯ, ವನಪಾಲಕ ಮತ್ತು ಸಿಬ್ಬಂದಿಯವರು ಸೊರಬ ತಾ॥ ಆನವಟ್ಟಿ ಹೋಬಳಿ ಹಾಯ, ಬೆಟ್ಟದಕುರ್ಲಿ ರಸ್ತೆಯಲ್ಲಿ ರಾತ್ರಿ ಸುಮಾರು 11–00 ಗಂಟೆ ಸಮಯದಲ್ಲಿ ಗಸ್ತು ಮಾಡುತ್ತಾ, ತುಡ್ನೂರು ಮಾರ್ಗವಾಗಿ ಬರುತ್ತಿರುವಾಗ ಒಂದು ವಾಹನ ಬರುತ್ತಿರುವುದನ್ನು ನಿಲ್ಲಿಸಲು ಸೂಚಿಸಿದರೂ ನಿಲ್ಲಿಸದೇ ವೇಗವಾಗಿ ಮುಂದೆ ಹೋದಾಗ ಅದನ್ನು ಇಲಾಖಾ ಜೀಪಿನಲ್ಲಿ ಬೆನ್ನಟ್ಟಿ ಹೋದಾಗ ಸದರಿ ವಾಹನವು ಸಮನವಳ್ಳಿ ಗೊಲ್ಲರ ತಂಡಕ್ಕೆ ಹೋಗುವ ಕೆಸರು ರಸ್ತೆಯಲ್ಲಿ ನಿಲ್ಲಿಸಿ, ವಾಹನದಲ್ಲಿದ್ದ ಆಸಾಮಿಗಳು ಪರಾರಿಯಾಗಿರುತ್ತಾರೆ. ವಾಹನ ಮಾರುತಿ ಓಮ್ನಿ ಕೆಎ–27–ಎಂ–2092, ಛಾಸ್ಸಿಸ್ ನಂಬರ್ ಮತ್ತು ಇಂಜಿನ್ ನಂಬರ್ ಕಂಡುಬಂದಿರುವುದಿಲ್ಲ. ವಾಹನದೊಳಗಡೆ ಹಸಿಯಾದ ರಹದಾರಿ ಇಲ್ಲದ ಮತ್ತು ಇಲಾಖಾ ಛಾಪಾದ ಗುರುತಿಲ್ಲದ ಸಾಗುವಾನಿ ನಾಟ 06=0.261ಎಂ3 ಮತ್ತು ಬೀಟೆ ನಾಟಾ 03=0.087ಎಂ3ಗಳಿದ್ದು, ಇದು

ಅಕ್ರಮ ಸಾಗಾಣಿಕೆ ಎಂದು ಪರಿಗಣಿಸಿ, ವಾಹನ ಮತ್ತು ಅರಣ್ಯ ಉತ್ಪನ್ನಗಳಿಗೆ ಪ್ರಥಮ ವರ್ತಮಾನ ವರದಿ, ಮಹಜರ್ ವರದಿ, ಜಪ್ತು ವರದಿಯೊಂದಿಗೆ ವಾಹನ ಮತ್ತು ವಾಹನದಲ್ಲಿದ್ದ ಅರಣ್ಯ ಉತ್ಪನ್ನವನ್ನು ಇಲಾಖಾ ಪರ ಜಪ್ತುಮಾಡಿ ಕರ್ನಾಟಕ ಅರಣ್ಯ ಕಾಯ್ದೆ 1963 ಸೆಕ್ಷನ್ 24, 62, 71(ಎ), 104 (ಎ) ಮತ್ತು ಕರ್ನಾಟಕ ಅರಣ್ಯ ಕಾನೂನು 1969ರ ಉಪನಿಯಮ 144, 165ರ ಪ್ರಕಾರ ಆನವಟ್ಟಿ ವಲಯದ ಅರಣ್ಯ ಮೊಕದ್ದಮೆ ಸಂಖ್ಯೆ:50/10–11ನ್ನು ದಾಖಲಿಸಿ, ವಾಹನವನ್ನು ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಇವರ ಸಮಕ್ಷಮ ಹಾಜರ್ಪಡಿಸಿರುತ್ತಾರೆ. ನಂತರ ಈ ವಾಹನವನ್ನು ಸರ್ಕಾರಿ ನಾಟಾ ಸಂಗ್ರಹಾಲಯದಲ್ಲಿರುವ ವಾಹನ ಶೆಡ್ಡಿನಲ್ಲಿ ಸುರಕ್ಷತೆಗಾಗಿ ಇಡಲು ವಲಯ ಅರಣ್ಯಾಧಿಕಾರಿ, ಸರ್ಕಾರಿ ನಾಟಾ ಸಂಗ್ರಹಾಲಯ, ಸಾಗರ ಇವರ ಸುಪರ್ಧಿಗೆ ಕೊಡಲು ಆದೇಶವಾಗಿದೆ.

ಈ ಪ್ರಕರಣದಲ್ಲಿ ವಲಯ ಅರಣ್ಯಾಧಿಕಾರಿ, ಆನವಟ್ಟಿ ವಲಯ, ಇವರು ಈ ನ್ಯಾಯಾಲಯಕ್ಕೆ ವಿಚಾರಣಾ ವರದಿಯನ್ನು ಸಲ್ಲಿಸಿ, ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಕೋರಿರುತ್ತಾರೆ.

ಈ ವಾಹನದ ಬಿ ವರದಿಯನ್ನು ಈ ನ್ಯಾಯಾಲಯಕ್ಕೆ ಒದಗಿಸಲು ಪ್ರಾದೇಶಿಕ ಸಾರಿಗೆ ಅಧಿಕಾರಿ, ಹಾವೇರಿ ಇವರಿಗೆ ಈ ನ್ಯಾಯಾಲಯದಿಂದ ಸಂ:ಬಿ3.ಅಮೊ.ವಾಹನ.ಸಿಆರ್.14/10–11 ದಿ:07–08–2010 ರಂದು ಪತ್ರ ಬರೆದು ಕೋರಲಾಗಿದೆ. ಅದಕ್ಕೆ ಹಾವೇರಿ ಸಾರಿಗೆ ಅಧಿಕಾರಿ ರವರ ಸಂ:ಪ್ರಾಸಾಕ.ಹಾ.ಕೆಎ–27–ಎಂ–2092 ದಿ:12–08–2010ರ ಪತ್ರದಲ್ಲಿ ಈ ವಾಹನದ ತಿರುವಳಿಯನ್ನು ದಿ:18–01–2010 ರಂದು ಸಾರಿಗೆ ಅಧಿಕಾರಿ, ಸಾಗರ ಇವರಿಗೆ ಕಳುಹಿಸಿದರ ಬಗ್ಗೆ ವರದಿಸಿರುತ್ತಾರೆ. ಇವರು ತಿಳಿಸಿದಂತೆ ಸಾರಿಗೆ ಅಧಿಕಾರಿ, ಸಾಗರ ಇವರಿಗೆ ಬಿ3.ಅಮೊ.ವಾಹನ.ವಿವ.14/10-11 ದಿ:01–10–2010 ರಂದು ಪತ್ರ ಬರೆದು ಈ ವಾಹನದ ಬಿ ಎಕ್ಸ್‌ಟ್ರ್ಯಾಕ್ಟ್‌ನ್ನು ಈ ನ್ಯಾಯಾಲಯಕ್ಕೆ ಒದಗಿಸಲು ಕೋರಲಾಗಿತ್ತು. ಆದರೆ, ಅವರಿಂದ ಇಲ್ಲಿಯವರೆಗೂ ಈ ವಾಹನ ಬಿ ವರದಿಯನ್ನು ಈ ನ್ಯಾಯಾಲಯಕ್ಕೆ ಸಲ್ಲಿಸಿರುವುದಿಲ್ಲ. ಈ ವಾಹನ ಮುಟ್ಟುಗೋಲು ಹಾಕಿಕೊಂಡ ನಂತರ ಆರ್.ಸಿ. ಮಾಲೀಕರು ನ್ಯಾಯಾಲಯದ ಮೊರೆ ಹೋದಲ್ಲಿ ಅದಕ್ಕೆ ಸಾರಿಗೆ ಅಧಿಕಾರಿ, ಸಾಗರ ಇವರೇ ನೇರ ಹೊಣೆಗಾರರಾಗಿರುತ್ತಾರೆ.

ಈ ನಡುವೆ ಈ ವಾಹನದ ಬಗ್ಗೆ ಹೆಚ್ಚಿನ ಪ್ರಚಾರಕ್ಕಾಗಿ ಈ ನ್ಯಾಯಾಲಯದಿಂದ 30 ದಿನಗಳ ಕಾಲಾವಕಾಶ ನೀಡಿ ಸಂಖ್ಯೆ:ಬಿ3:ಅಮೊ:ವಾಹನ:ಸಿಆರ್–22/10–11ದಿ:11–08–2010ರಂದುಪ್ರಕಟಣೆಯನ್ನು ಹೊರಡಿಸಿ ಪ್ರತಿಯನ್ನು ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ ವಿಭಾಗ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಹಾಗೂ ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ, ಬೆಂಗಳೂರು ಇವರಿಗೆ ಕಳುಹಿಸಿ ರಾಜ್ಯ ಮಟ್ಟದ ಪ್ರಚಲಿತ ದೈನಿಕ ಪತ್ರಿಕೆಯಲ್ಲಿ ಪ್ರಕಟಿಸಲು ಕೋರಲಾಗಿತ್ತು. ಅದರಂತೆ ದಿ: 24–08–2010 ರಂದು ಸಾಗರ ವಾರ್ತಾ ದಿನಪತ್ರಿಕೆಯಲ್ಲಿ ಮತ್ತು ದಿ:02–09–2010ರಂದು ರಾಜ್ಯ ಗೆಜೆಟ್ ಪತ್ರಿಕೆಯಲ್ಲಿ ಪ್ರಕಟಗೊಂಡು 30 ದಿನಗಳಾದರು ವಾಹನ ಮಾಲೀಕರಾಗಲೀ ಅಥವಾ ಅವರ ಪರ ವಕೀಲರಾಗಲೀ ಈ ನ್ಯಾಯಾಲಯಕ್ಕೆ ಹಕ್ಕುಬಾಧ್ಯತೆಯ ಅರ್ಜಿ ಸಲ್ಲಿಸಿರುವುದಿಲ್ಲ.

ಸಹಾಯಕ ಸರ್ಕಾರಿ ಅಭಿಯೋಜಕರು ದಿ:26–02–2011ರಂದು ವಾದ ಮಂಡಿಸಿ ಈ ವಾಹನದಲ್ಲಿ ಅರಣ್ಯ ಉತ್ಪನ್ನವನ್ನು ಕಳ್ಳ ಸಾಗಾಣಿಕೆ ಮಾಡುತ್ತಿರುವ ಸಮಯದಲ್ಲಿ ವಾಹನವನ್ನು ಅರಣ್ಯ ಉತ್ಪನ್ನದ ಸಮೇತ ವಲಯ ಅರಣ್ಯಾಧಿಕಾರಿ, ಆನವಟ್ಟಿ ವಲಯ, ಇವರು ಜಪ್ತುಮಾಡಿ, ಪ್ರಥಮ ವರ್ತಮಾನ ವರದಿ, ಜಪ್ತಿ ವರದಿ, ಮಹಜರ್ ವರದಿಯನ್ನು ಈ ನ್ಯಾಯಾಲಯಕ್ಕೆ ಹಾಜರ್ಪಡಿಸಿರುತ್ತಾರೆ. ಇದರಿಂದ ಈ ವಾಹನದಲ್ಲಿ ಅರಣ್ಯ ಉತ್ಪನ್ನ ಕಳ್ಳ ಸಾಗಾಣಿಕೆ ಮಾಡಿದ ಬಗ್ಗೆ ಸಾಬೀತಾಗಿದೆ. ಆದ್ದರಿಂದ ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಕೋರಿರುತ್ತಾರೆ.

ಈ ಪ್ರಕರಣದ ಎಲ್ಲಾ ದಾಖಲೆಗಳನ್ನು ಪರಿಶೀಲಿಸಿ, ಅಭಿಯೋಜಕರ ವಾದವನ್ನು ಕೇಳಿದೆ ಮತ್ತು ಈ ವಾಹನದ ಬಗ್ಗೆ ಪತ್ರಿಕಾ ಪ್ರಕಟಣೆ ಹೊರಡಿಸಿರುತ್ತದೆ. ಈ ಪ್ರಕಟಣೆಯು ರಾಜ್ಯ ಗೆಜೆಟ್‌ನಲ್ಲಿ ಪ್ರಕಟಗೊಂಡು 30 ದಿನಗಳಾದರೂ ಯಾರೂ ಹಕ್ಕು ಬಾಧ್ಯತೆಯ ಅರ್ಜಿಯನ್ನು ಈ ನ್ಯಾಯಾಲಯಕ್ಕೆ ಸಲ್ಲಿಸದೇ ಇದ್ದುದ್ದರಿಂದ ಈ ಪ್ರಕರಣದ ವಿದ್ಯಾಮಾನಗಳನ್ನು ಅರಿತು ಈ ಕೆಳಗಿನಂತೆ ಆದೇಶ ಹೊರಡಿಸಿದೆ.

ಆದೇಶ

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳನ್ನು ಗಣನೆಗೆ ತೆಗೆದುಕೊಂಡು ಶ್ರೀ ಮನೋಜ್ ಕುಮಾರ ತ್ರಿಪಾಠಿ, ಭಾ.ಅ.ಸೇ., ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಆದ ನಾನು, ಕರ್ನಾಟಕ ಅರಣ್ಯ ಕಾಯಿದೆ 1963 ಸೆಕ್ಷನ್ 71(ಎ) ರಿಂದ (ಜಿ) ಕಾಯಿದೆ ಪ್ರಕಾರ ವಲಯ ಅರಣ್ಯಾಧಿಕಾರಿ, ಆನವಟ್ಟಿ ವಲಯ, ಇವರು ಜಪ್ತು ಮಾಡಿದ ವಾಹನ ಮಾರುತಿ ವ್ಯಾನ್ ಕೆಎ–27–ಎಂ–2092, (ಇಂಜಿನ್ ನಂಬರ್ ಮತ್ತು ಛಾಸ್ಸಿಸ್ ನಂಬರ್ ಕಂಡುಬಂದಿರುವುದಿಲ್ಲ)ನ್ನು ಮತ್ತು ಈ ವಾಹನದಲ್ಲಿದ್ದ ಸಾಗುವಾನಿ ನಾಟಾ 06=0.261 ಎಂ3, ಮತ್ತು ಬೀಟೆ ನಾಟಾ 03=0.087 ಎಂ3ನ್ನು ಕರ್ನಾಟಕ ಸರ್ಕಾರದ ಸಂಪತ್ತು ಆಗಿರುವುದರಿಂದ ಅಂತಿಮವಾಗಿ ಮುಟ್ಟುಗೋಲು ಹಾಕಿಕೊಂಡಿರುತ್ತೇನೆ. ಮುಟ್ಟುಗೋಲು ಹಾಕಿಕೊಂಡ ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಅನುಕೂಲಕರವಾಗಿ ವಿಲೇ ಮಾಡಲು ಆದೇಶಿಸಿದ್ದೇನೆ. ಈ ಆದೇಶವನ್ನು ಹೇಳಿ ಬರೆಯಿಸಿ, ಗಣಕಯಂತ್ರದಲ್ಲಿ ಮುದ್ರಿಸಿ, ನಂತರ ಸರಿಪಡಿಸಿ ದಿ:28–05–2011 ರಂದು ನನ್ನ ಸಹಿ ಹಾಗೂ ಮೊಹರಿನೊಂದಿಗೆ ತೆರೆದ ನ್ಯಾಯಾಲಯದಲ್ಲಿ ಆದೇಶಿಸಿದ್ದೇನೆ. ಈ ಆದೇಶ ಹೊರಡಿಸಿದ 30 (ಮೂವತ್ತು) ದಿನಗಳ ಒಳಗಾಗಿ ಯಾರು ಮೇಲ್ಮನವಿ ಸಲ್ಲಿಸದೇ ಹೋದಲ್ಲಿ ಇದೇ ಅಂತಿಮ ಆದೇಶವಾಗಿರುತ್ತದೆ.

ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ
ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ.

ಪಿ.ಆರ್.651

ಕೃಷಿ ಮಾರಾಟ ಇಲಾಖೆ

ಕೃಷಿ ಮಾರಾಟ ನಿರ್ದೇಶಕರ ಕಛೇರಿ, ನಂ.16, 11ನೇ ರಾಜಭವನ ರಸ್ತೆ, ಪಿ.ಬಿ.ನಂ.5309, ಬೆಂಗಳೂರು

ಅಧಿಸೂಚನೆ

ಸಂಖ್ಯೆ: ಕೃಮಾಇ/26/ಚುನಾವ/2005, ಬೆಂಗಳೂರು, ದಿನಾಂಕ:30/31.05.2010

ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ, 1966ರ ಕಲಂ 11ರ ಉಪ ಪ್ರಕರಣ (1)(viii)ರಲ್ಲಿನ ಅಧಿಕಾರದ ಮೇರೆಗೆ ಕರ್ನಾಟಕದಲ್ಲಿನ ಕೃಷಿ ಮಾರಾಟ ಇಲಾಖೆಯ ನಿರ್ದೇಶಕನಾದ ವಿ.ಬಿ. ಪಾಟೀಲ್ ಆದ ನಾನು ಕಛೇರಿಯ ಅಧಿಸೂಚನೆ ಸಂಖ್ಯೆ: ಕೃಮಾಇ/26/ಚುನಾವ/2005, ದಿನಾಂಕ:25.10.2010ರಲ್ಲಿ ಗಂಗಾವತಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗೆ ಮಾಡಿದ್ದ ಇಲಾಖಾ ಪ್ರತಿನಿಧಿ ನಾಮನಿರ್ದೇಶನವನ್ನು ರದ್ದುಗೊಳಿಸಿ, ಈ ಕೆಳಕಂಡ ಅಧಿಕಾರಿಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಇಲಾಖಾ ಪ್ರತಿನಿಧಿ ಸದಸ್ಯರನ್ನಾಗಿ ನಾಮಕರಣ ಮಾಡಿದ್ದೇನೆ.

ಕ್ರಮ ಸಂಖ್ಯೆ	ಜಿಲ್ಲೆಯ ಹೆಸರು	ಸಮಿತಿಯ ಹೆಸರು	ಸದಸ್ಯರನ್ನಾಗಿ ನಾಮಕರಣ ಮಾಡಲಾಗಿರುವ ಅಧಿಕಾರಿ
1.	ಕೊಪ್ಪಳ	ಗಂಗಾವತಿ	ಕಾರ್ಯದರ್ಶಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ರಾಯಚೂರು.

ವಿ.ಬಿ. ಪಾಟೀಲ್

ಪಿ.ಆರ್.579 ನಿರ್ದೇಶಕರು.

ಕರ್ನಾಟಕ ವಿಧಾನ ಪರಿಷತ್ತು

ವಿಧಾನ ಪರಿಷತ್ತಿನ ಸಚಿವಾಲಯ, ಅಂಚೆ ಪೆಟ್ಟಿಗೆ ಸಂಖ್ಯೆ:5079, ವಿಧಾನಸೌಧ, ಬೆಂಗಳೂರು–560 001

ಅಧಿಸೂಚನೆ

ಸಂಖ್ಯೆ: ಕವಿಪ/ಶಾರಶಾ/424/115ನೇ ಅ/11, ಬೆಂಗಳೂರು, ದಿನಾಂಕ:07.06.2011

2ನೇ ಜೂನ್, 2011ರ ಗುರುವಾರದಂದು ಪ್ರಾರಂಭವಾದ ಕರ್ನಾಟಕ ವಿಧಾನ ಪರಿಷತ್ತಿನ ನೂರ ಹದಿನೈದನೆಯ ಅಧಿವೇಶನವನ್ನು 7ನೇ ಜೂನ್, 2011ರ ಮಂಗಳವಾರದಂದು ಅನಿರ್ದಿಷ್ಟ ಕಾಲದವರೆಗೆ ಮುಂದೂಡಲಾಯಿತು.

ವಿ. ಶ್ರೀಶ್

ಕಾರ್ಯದರ್ಶಿ,

ಕರ್ನಾಟಕ ವಿಧಾನ ಪರಿಷತ್ತು.

KARNATAKA LEGISLATIVE COUNCIL

Legislative Council Secretariat, P.B.No.5079, Vidhana Soudha, Bangalore-560 001

NOTIFICATION

No.KLC/LGC/424/115th Session/11, Bangalore, Dated:07.06.2011

The Hundred and Fifteenth Session of Karnataka Legislative Council which commenced on Thursday, the 02nd June, 2011 was adjourned sine-die on Tuesday, the 7th June, 2011.

V. SHREESH

PR-642 Secretary,

Karnataka Legislative Council.

ಕರ್ನಾಟಕ ವಿಧಾನಸಭೆ

ವಿಧಾನಸಭೆಯ ಸಚಿವಾಲಯ, ಅಂಚೆ ಪೆಟ್ಟಿಗೆ ನಂ.5074, ವಿಧಾನಸೌಧ, ಬೆಂಗಳೂರು–560 233

ಸಂಖ್ಯೆ: ವಿಸಸ/ಶಾರಶಾ/24/ಸಿಎ/2011, ಬೆಂಗಳೂರು, ದಿನಾಂಕ:03.06.2011

ವಿಷಯ: ವಿಧಾನಸಭಾ ಸದಸ್ಯರ ವಿಳಾಸ ಬದಲಾವಣೆ.

ಹೊಸದುರ್ಗ ವಿಧಾನಸಭಾ ಕ್ಷೇತ್ರದ ಮಾನ್ಯ ಸದಸ್ಯರಾದ ಶ್ರೀ ಗೂಳಿಹಟ್ಟಿ ಡಿ. ಶೇಖರ್ ಅವರು ಕೆಳಕಂಡಂತೆ ತಮ್ಮ ವಿಳಾಸವನ್ನು ಬದಲಾಯಿಸಿರುತ್ತಾರೆ.

ಶ್ರೀ ಗೂಳಿಹಟ್ಟಿ ಡಿ. ಶೇಖರ್,

ವಿಧಾನಸಭಾ ಸದಸ್ಯರು, ನಂ.47, ಅಜ್ಜಯ್ಯ ಲೇಔಟ್, 2ನೇ ಕ್ರಾಸ್, ಆರ್.ಎಂ.ವಿ. ಎಕ್ಸ್‌ಟೆನ್ಷನ್ ವಾರ್ಡ್ ನಂ.35, ಸದಾಶಿವನಗರ (ಮೇಕ್ರಿ ಸರ್ಕಲ್ ಹತ್ತಿರ), ಬೆಂಗಳೂರು.

ಆದಕಾರಣ, ಮಾನ್ಯ ಸದಸ್ಯರಿಗೆ ಇನ್ನು ಮುಂದೆ ಕಳುಹಿಸಲಾಗುವ ಎಲ್ಲಾ ಕಾಗದ ಪತ್ರಗಳನ್ನು ಮೇಲ್ಕಂಡ ವಿಳಾಸಕ್ಕೆ ಕಳುಹಿಸಿಕೊಡಬೇಕೆಂದು ಕೋರಲು ನಿರ್ದೇಶಿತನಾಗಿದ್ದೇನೆ.

ಕೆ.ಸಿ. ಗೋಪಿಕೃಷ್ಣ

ಪಿ.ಆರ್.605 ಅಧೀನ ಕಾರ್ಯದರ್ಶಿ,

ಕರ್ನಾಟಕ ವಿಧಾನಸಭೆ.

ಕರ್ನಾಟಕ ವಿಧಾನಸಭೆ

ವಿಧಾನಸಭೆಯ ಸಚಿವಾಲಯ, ಅಂಚೆ ಪೆಟ್ಟಿಗೆ ನಂ.5074, ವಿಧಾನಸೌಧ, ಬೆಂಗಳೂರು-560 233

ಸಂಖ್ಯೆ: ವಿಸಸ/ಶಾರಶಾ/24/ಸಿಎ/2011, ಬೆಂಗಳೂರು, ದಿನಾಂಕ:02.06.2011

ವಿಷಯ: ವಿಧಾನಸಭಾ ಸದಸ್ಯರ ವಿಳಾಸ ಬದಲಾವಣೆ.

ಕನಕಗಿರಿ ವಿಧಾನಸಭಾ ಕ್ಷೇತ್ರದ ಮಾನ್ಯ ಸದಸ್ಯರಾದ ಶ್ರೀ ಶಿವರಾಜ್ ಎಸ್. ತಂಗಡಗಿ ಅವರು ಕೆಳಕಂಡಂತೆ ತಮ್ಮ ವಿಳಾಸವನ್ನು ಬದಲಾಯಿಸಿರುತ್ತಾರೆ.

ಶ್ರೀ ಶಿವರಾಜ್ ಎಸ್. ತಂಗಡಗಿ,

ವಿಧಾನಸಭಾ ಸದಸ್ಯರು, ನಂ.456, 5ನೇ ಮುಖ್ಯರಸ್ತೆ, 7ನೇ ಅಡ್ಡರಸ್ತೆ, ಹೆಚ್.ಎ.ಜಿ., ಆರ್.ಎಂ.ವಿ. 2ನೇ ಹಂತ, ಬೆಂಗಳೂರು.

ಆದಕಾರಣ, ಮಾನ್ಯ ಸದಸ್ಯರಿಗೆ ಇನ್ನು ಮುಂದೆ ಕಳುಹಿಸಲಾಗುವ ಎಲ್ಲಾ ಕಾಗದ ಪತ್ರಗಳನ್ನು ಮೇಲ್ಕಂಡ ವಿಳಾಸಕ್ಕೆ ಕಳುಹಿಸಿಕೊಡಬೇಕೆಂದು ಕೋರಲು ನಿರ್ದೇಶಿತನಾಗಿದ್ದೇನೆ.

ಕೆ.ಸಿ. ಗೋಪಿಕೃಷ್ಣ
ಅಧೀನ ಕಾರ್ಯದರ್ಶಿ,
ಕರ್ನಾಟಕ ವಿಧಾನಸಭೆ.

ಪಿ.ಆರ್.606

ಕರ್ನಾಟಕ ವಿಧಾನಸಭೆ

ವಿಧಾನಸಭೆಯ ಸಚಿವಾಲಯ, ಅಂಚೆ ಪೆಟ್ಟಿಗೆ ನಂ.5074, ವಿಧಾನಸೌಧ, ಬೆಂಗಳೂರು-560 233

ಸಂಖ್ಯೆ: ವಿಸಸ/ಶಾರಶಾ/24/ಸಿಎ/2011, ಬೆಂಗಳೂರು, ದಿನಾಂಕ:01.06.2011

ವಿಷಯ: ವಿಧಾನಸಭಾ ಸದಸ್ಯರ ವಿಳಾಸ ಬದಲಾವಣೆ.

ಚಾಮರಾಜ ವಿಧಾನಸಭಾ ಕ್ಷೇತ್ರದ ಮಾನ್ಯ ಸದಸ್ಯರಾದ ಶ್ರೀ ಹೆಚ್.ಎಸ್. ಶಂಕರಲಿಂಗೇಗೌಡ ಅವರು ಕೆಳಕಂಡಂತೆ ತಮ್ಮ ವಿಳಾಸವನ್ನು ಬದಲಾಯಿಸಿರುತ್ತಾರೆ.

ಶ್ರೀ ಹೆಚ್.ಎಸ್. ಶಂಕರಲಿಂಗೇಗೌಡ

ವಿಧಾನಸಭಾ ಸದಸ್ಯರು, ನಂ.85, 'ನಾಗಲಕ್ಷ್ಮಿ ಶಂಕರಾಲಯ' ಸಾಹುಕಾರ ಚನ್ನಯ್ಯ ರಸ್ತೆ, ಟಿ.ಕೆ. ಬಡಾವಣೆ, ಮೈಸೂರು.

ಆದಕಾರಣ, ಮಾನ್ಯ ಸದಸ್ಯರಿಗೆ ಇನ್ನು ಮುಂದೆ ಕಳುಹಿಸಲಾಗುವ ಎಲ್ಲಾ ಕಾಗದ ಪತ್ರಗಳನ್ನು ಮೇಲ್ಕಂಡ ವಿಳಾಸಕ್ಕೆ ಕಳುಹಿಸಿಕೊಡಬೇಕೆಂದು ಕೋರಲು ನಿರ್ದೇಶಿತನಾಗಿದ್ದೇನೆ.

ಕೆ.ಸಿ. ಗೋಪಿಕೃಷ್ಣ
ಅಧೀನ ಕಾರ್ಯದರ್ಶಿ,
ಕರ್ನಾಟಕ ವಿಧಾನಸಭೆ.

ಪಿ.ಆರ್.607

ಜಿಲ್ಲಾ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಅಧಿಕಾರಿಯವರ ಕಛೇರಿ, ಉತ್ತರ ಕನ್ನಡ, ಕಾರವಾರ

ಪ್ರಕಟಣೆ

ಸಂಖ್ಯೆ: ಬಿಸಿಎಂ:ಅ.ಸ.:ಕಾನೂನು:ಸಿಆರ್-11:2011-12, ದಿನಾಂಕ:20.06.2011

ವಿಷಯ: 2011-12ನೇ ಸಾಲಿನಲ್ಲಿ ಮತೀಯ ಅಲ್ಪಸಂಖ್ಯಾತರ ಕಾನೂನು ಪದವೀಧರರಿಗೆ ತರಬೇತಿ ನೀಡುವ ಕುರಿತು.

2011-12ನೇ ಸಾಲಿನಲ್ಲಿ ಉತ್ತರ ಕನ್ನಡ ಜಿಲ್ಲೆಯ ಮತೀಯ ಅಲ್ಪಸಂಖ್ಯಾತರ ಕಾನೂನು ಪದವೀಧರರಿಗೆ ವಕೀಲ ವೃತ್ತಿ ಮತ್ತು ಜ್ಯೂಡಿಸಿಯಲ್ ಸೇವೆಗೆ ಸಂಬಂಧಿಸಿದಂತೆ ನ್ಯಾಯಾಡಳಿತದಲ್ಲಿ 4 ವರ್ಷಗಳ ತರಬೇತಿ ನೀಡುವ ಕುರಿತು ಮತೀಯ ಅಲ್ಪಸಂಖ್ಯಾತರ ಕಾನೂನು ಪದವೀಧರರಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಆಸಕ್ತ ಮತೀಯ ಅಲ್ಪಸಂಖ್ಯಾತರ ಕಾನೂನು ಪದವೀಧರರು ಈ ಕೆಳಕಂಡ ನಿಬಂಧನೆಗಳಿಗೊಳಪಟ್ಟು ಅರ್ಜಿಗಳನ್ನು ದಿನಾಂಕ:20.07.2011ರ ಒಳಗಾಗಿ ಜಿಲ್ಲಾ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಅಧಿಕಾರಿಗಳು, ಉತ್ತರ ಕನ್ನಡ ಜಿಲ್ಲೆ, ಕಾರವಾರ ರವರಿಗೆ ಸಲ್ಲಿಸತಕ್ಕದ್ದು. ನಿಗದಿತ ಅರ್ಜಿ ನಮೂನೆಗಳನ್ನು ಈ ಕಛೇರಿಯಿಂದ ಪಡೆಯಬಹುದಾಗಿದೆ.

ನಿಬಂಧನೆಗಳು:

1) ಅಭ್ಯರ್ಥಿಯು ಕಾನೂನು ಪದವಿ ಪಾಸು ಮಾಡಿರಬೇಕು. ಮತೀಯ ಅಲ್ಪಸಂಖ್ಯಾತರ ವರ್ಗಕ್ಕೆ ಸೇರಿದವರಾಗಿರಬೇಕು. (ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ ಮತ್ತು ಫಾರ್ಸಿ) ಸಮುದಾಯಕ್ಕೆ ಸೇರಿದವರಾಗಿದ್ದು ರಾಜ್ಯದ ನಿವಾಸಿಯಾಗಿರಬೇಕು. ವಕೀಲ ವೃತ್ತಿ ಅಭ್ಯಾಸ (ಪ್ರೈಕ್ಟೀಸ್) ನಿಗದಿಪಡಿಸಿರುವ ಅರ್ಹತೆ ಹೊಂದಿದ್ದು ತರಬೇತಿಗೆ ಅರ್ಜಿ ಸಲ್ಲಿಸುವ ದಿನಾಂಕಕ್ಕಿಂತ ಮುಂಚಿತವಾಗಿ ಎರಡು ವರ್ಷದೊಳಗೆ ಬಾರ್ ಕೌನ್ಸಿಲ್‌ನಲ್ಲಿ ಹೆಸರು ನೊಂದಾಯಿಸಿಕೊಂಡಿರತಕ್ಕದ್ದು.

2) ಕಾನೂನು ತರಬೇತಿ ಭತ್ಯೆಗಾಗಿ ಜಿಲ್ಲೆಯಿಂದ ಎರಡು ಅಭ್ಯರ್ಥಿಗಳನ್ನು ಮಾತ್ರ ಆಯ್ಕೆ ಮಾಡಲಾಗುವುದು.

3) ಅಭ್ಯರ್ಥಿಗಳ ಪಾಲಕರು/ ಪೋಷಕರ ವಾರ್ಷಿಕ ಆದಾಯ ಮಿತಿ ರೂ.15,000/- ರ ಒಳಗಿರಬೇಕು. ಪ್ರವರ್ಗ-1 ರಡಿಯಲ್ಲಿ ಬರುವ ಮತೀಯ ಅಲ್ಪಸಂಖ್ಯಾತರ ಅಭ್ಯರ್ಥಿಗಳಿಗೆ ಆದಾಯ ಮಿತಿ ಇರುವುದಿಲ್ಲ.

4) ತರಬೇತಿ ಅವಧಿಯು ನಾಲ್ಕು ವರ್ಷಗಳು ತರಬೇತಿ ಅವಧಿಯಲ್ಲಿ ಮಾಹೆಯಾನ ರೂ.1,000/- ದಂತೆ ತರಬೇತಿ ಭತ್ಯೆ ನೀಡಲಾಗುವುದು.

5) ತರಬೇತಿ ಸೌಲಭ್ಯ ಪಡೆಯಲಿಚ್ಚಿಸುವ ಅಭ್ಯರ್ಥಿಗಳ ವಯೋಮಿತಿ 30 ವರ್ಷ ಮೀರಿರಬಾರದು.

6) ಆಯ್ಕೆಯಾದ ಅಭ್ಯರ್ಥಿಗಳು ಜಿಲ್ಲಾ ಪಬ್ಲಿಕ್ ಪ್ರೊಸಿಕ್ಯೂಟರ್, ಸರ್ಕಾರಿ ವಕೀಲರು ಇತರೇ ಯಾವುದೇ 20 ವರ್ಷಗಳಿಗೆ ಕಡಿಮೆ ಇಲ್ಲದಂತೆ ಸೇವೆ ಸಲ್ಲಿಸಿರುವ ವಕೀಲರ ಹತ್ತಿರ ತರಬೇತಿಗೆ ನಿಯೋಜಿಸಲಾಗುವುದು.

7) ಆಯ್ಕೆಯಾದ ಅಭ್ಯರ್ಥಿಗಳು ಸುಳ್ಳು ಆದಾಯ, ಜಾತಿ ಪ್ರಮಾಣ ಪತ್ರ ನೀಡಿ ಆಯ್ಕೆಯಾಗಿರುವುದು ಕಂಡು ಬಂದಲ್ಲಿ ಶಿಕ್ಷೆಗೆ ಗುರಿಪಡಿಸಿ ತರಬೇತಿ ಭತ್ಯೆ ನೀಡಿರುವ ಒಟ್ಟು ಹಣದ ಜೊತೆಗೆ ಶೇಕಡಾ 10% ಬಡ್ಡಿ ಸೇರಿಸಿ ಕಂದಾಯ ಬಾಕಿ ರೂಪದಲ್ಲಿ ವಸೂಲು ಮಾಡಲಾಗುವುದು. ಅಪೂರ್ಣ ಹಾಗೂ ಸಕಾಲದಲ್ಲಿ ಬಾರದ ಅರ್ಜಿಗಳನ್ನು ಯಾವುದೇ ಕಾರಣ ನೀಡದೇ ತಿರಸ್ಕರಿಸಲಾಗುವುದು.

ಜಿಲ್ಲಾ ಹಿಂದುಳಿದ ವರ್ಗಗಳ ಮತ್ತು
ಅಲ್ಪಸಂಖ್ಯಾತರ ಅಧಿಕಾರಿ, ಕಾರವಾರ.

ಪಿ.ಆರ್.671

ಗೌರವಾನ್ವಿತ 1ನೇ ಎ.ಸಿ.ಎಂ.ಎಂ. ನ್ಯಾಯಾಲಯ, ಬೆಂಗಳೂರು ನಗರ

ಪ್ರಕಟಣೆ

ದಿನಾಂಕ:08.06.2011

ಈ ಮೂಲಕ ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ, ಚಾಮರಾಜಪೇಟೆ ಪೊಲೀಸ್ ಠಾಣೆಯಲ್ಲಿ ವಾರಸುದಾರರು ಇಲ್ಲದ ಈ ಕೆಳಕಂಡ ವಾಹನಗಳನ್ನು ಮತ್ತು ಠಾಣಾ ಪ್ರಕರಣಗಳಲ್ಲಿ ಈ ಕೆಳಕಂಡ ವಾಹನಗಳನ್ನು ಅಮಾನತ್ತು ಪಡಿಸಿಕೊಂಡಿರುತ್ತದೆ. ಈ ಕೆಳಕಂಡ ಠಾಣಾ ಪ್ರಕರಣಗಳು ವಿಲೇವಾರಿಯಾಗಿ ವರ್ಷಗಳು ಕಳೆದರೂ ಸಹ ಸದರಿ ವಾಹನಗಳ ಮಾಲೀಕರುಗಳು ಇದುವರೆಗೆ ತಮ್ಮ ವಾಹನಗಳನ್ನು ಈ ನ್ಯಾಯಾಲಯದಿಂದ ಆದೇಶ ಪಡೆದು ತಮ್ಮ ಸುಪರ್ದಿಗೆ ಪಡೆದುಕೊಂಡಿರುವುದಿಲ್ಲ. ಸದರಿ ಈ ಕೆಳಕಂಡ ವಾಹನಗಳ ವಾರಸುದಾರರು ತಮ್ಮ ಮಾಲೀಕತ್ವದ ಬಗ್ಗೆ ಈ ಪ್ರಕಟಣೆ ಪ್ರಕಟವಾದ 30 ದಿನದೊಳಗಾಗಿ ವಾಹನಗಳ ಮಾಲೀಕತ್ವದ ಮೂಲ ದಾಖಲಾತಿಗಳೊಂದಿಗೆ ಈ ನ್ಯಾಯಾಲಯದಲ್ಲಿ ತಮ್ಮ ಮಾಲೀಕತ್ವವನ್ನು ರುಜುವಾತು ಪಡಿಸುವುದು. ನಿಗದಿಪಡಿಸಿದ ಅವಧಿಯೊಳಗಡೆ ಸದರಿ ವಾಹನಗಳ ಮಾಲಿಕತ್ವದ ಬಗ್ಗೆ ಈ ನ್ಯಾಯಾಲಯದಲ್ಲಿ ಹಾಜರಾಗಿ ರುಜುವಾತು ಪಡಿಸದಿದ್ದಲ್ಲಿ ನಿಯಮಾನುಸಾರ ಸಾರ್ವಜನಿಕರ ಬಹಿರಂಗ ಹರಾಜು ನಡೆಸಲಾಗುವುದು.

ವಾರಸುದಾರರು ಇಲ್ಲದೆ ಅಮಾನತ್ತು ಪಡಿಸಿಕೊಂಡಿರುವ ವಾಹನಗಳು

Sl. No.	Cmiss/PF No.	Type of Vehicle	Reg.No.	Cha.No.	Eng.No.
1.	Cmiss No.230/11 PF No.-49/11	T.V.S. XL	KA-01-S-2611	A101F527301	A101M50811
2.	Cmiss No.231/11 PF No.50/11	T.V.S. XL Super	KA-02-EV-3140	MD6218D1762D2757	0D1D61667941
3.	Cmiss No.232/11 PF No.51/11	Kinetic Honda	AP-31-Q-6099	NIFRE963411	959142NIERE
4.	Cmiss No.234/11 PF No.52/11	Kinetic Honda ZX	KA-05-Q-7757	N11MJ665334	658381NIEMJ
